ಕನ್ನಡ ದಿನಪತ್ರಿಕೆ
22 ಮಾರ್ಚ್ | ಶುಕ್ರವಾರ
22 MARCH 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 30 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26



## ಕಾಂಗ್ರೆಸ್ ಸೇರಲ್ಲ, ಆದರೆ ಬಿಜೆಪಿ ಶುದ್ಧೀಕರಣ ಮಾಡುತ್ತೇನೆ: ಡಿ.ವಿ. ಸದಾನಂದಗೌಡ

ಬೆಂಗಳೂರು: ನಾನು ಕಾಂಗ್ರೆಸ್‌ಗೆ ಸೇರುವುದಿಲ್ಲ. ಆದರೆ, ಬಿಜೆಪಿ ಶುದ್ಧೀಕರಣ ಮಾಡುವುದೇ ನನ್ನ ಮುಂದಿನ ಉದ್ದೇಶ ಎಂದು ಸಂಸದ ಡಿ.ವಿ.ಸದಾನಂದಗೌಡ ಹೇಳಿದ್ದಾರೆ.

ಸುದ್ದಿಗಾರರ ಜತೆ ಮಾತನಾಡಿದ ಅವರು, ನನಗೆ ಟಿಕೆಟ್ ಸಿಗದೇ ಇರುವುದಕ್ಕೆ ನೋವಾಗಿದೆ. ನನಗೆ ಅನ್ಯಾಯ ಮಾಡಿದವರು ಮತ್ತು ನೋವುಂಟು ಮಾಡಿದವರು ಮುಂದಿನ ದಿನಗಳಲ್ಲಿ ಪಶ್ಚಾತಾಪ ಪಡಲಿದ್ದಾರೆ ಎಂದರು.

ನಾನು ಚುನಾವಣಾ ಕಣದಿಂದ ದೂರ ಸರಿಯುವ ಉದ್ದೇಶ ಹೊಂದಿದ್ದೆ. ಆದರೆ ಒಬ್ಬರು ಮಾಜಿ ಮುಖ್ಯಮಂತ್ರಿ, ಇಬ್ಬರು ಮಾಜಿ ಡಿಸಿಎಂಗಳು ಮತ್ತು ಕೆಲವು ಮಾಜಿ ಮಂತ್ರಿಗಳು ಬಂದು ಚುನಾವಣೆಯಲ್ಲಿ ನಿಲ್ಲಲೇ ಬೇಕು ಎಂದು ಹೇಳಿದರು. ಆ ಬಳಿಕ ಟಿಕೆಟ್ ಬೇರೆಯವರಿಗೆ ಘೋಷಿಸಲಾಯಿತು ಎಂದರು.

ಮೋದಿಯವರು ದೇಶವೇ ನನ್ನ ಪರಿವಾರ ಎಂದಿದ್ದಾರೆ. ಆದರೆ ಇಲ್ಲಿ ಒಂದು ಕುಟುಂಬದ ಹಿಡಿತಕ್ಕೆ ಪಕ್ಷ ಸಿಲುಕಿದೆ. ಒಂದು ಕುಟುಂಬ, ಒಂದು ಜಾತಿಯ ಪಕ್ಷ ಆಗಬಾರದು. ಇದು ಪಕ್ಷದ ಸಿದ್ಧಾಂತ ಮತ್ತು ಮೋದಿಯವರ ನಿಲುವಿಗೆ ವಿರುದ್ಧವಾದುದು ಎಂದು ಸದಾನಂದಗೌಡ ಹೇಳಿದರು. ಕಾಂಗ್ರೆಸ್‌ನಿಂದ ಆಹ್ವಾನ ಬಂದಿದ್ದು ನಿಜ. ಆದರೆ, ನಾನು ಕಾಂಗ್ರೆಸ್‌ಗೆ ಹೋಗುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.



## ಕೆಎಸ್‌ಆರ್‌ಟಿಸಿ ಬಸ್ಸಿನಲ್ಲಿ ಸಾಗಿಸುತ್ತಿದ್ದ ಅರ್ಧ ಕೆಜಿ ಅಕ್ರಮ ಚಿನ್ನ ಜಪ್ತಿ

ಚಿಕ್ಕಮಗಳೂರು: ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ನೀತಿ ಸಂಹಿತೆ ಜಾರಿಯಲ್ಲಿ ಇದ್ದರೂ ಕೂಡ ಅಕ್ರಮವಾಗಿ ಹಣ ಸಾಗಾಟ ಹಾಗೂ ಚಿನ್ನ ಸಾಗಾಣೆ ಮಾಡುವುದು ಕಂಡುಬರುತ್ತದೆ. ಇದೀಗ ಚಿಕ್ಕಮಗಳೂರಿನಲ್ಲಿ ಕೆ ಎಸ್ ಆರ್ ಟಿ ಸಿ ಬಸ್ ನಲ್ಲಿ ಅರ್ಧ ಕೆಜಿ ಚಿನ್ನ ಸಾಗಿಸುತ್ತಿದ್ದು ಪೊಲೀಸರು ವಶಪಡಿಸಿಕೊಂಡಿದ್ದಾರೆ.

ಚಿನ್ನದ ಸರ ಸೇರಿ ಉಂಗುರಗಳನ್ನು ಪೊಲೀಸರು ಇದೀಗ ವಶಕ್ಕೆ ಪಡೆದುಕೊಂಡಿದ್ದಾರೆ ಎಂದು ತಿಳಿದುಬಂದಿದೆ.ಚಿನ್ನ ಸಾಗಿಸುತ್ತಿದ್ದ ಓರ್ವ ಪ್ರಯಾಣಿಕನನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ. ಚಿಕ್ಕಮಗಳೂರು ಡಿಪೋಗೆ ಸೇರಿದ ಬಸ್ನಲ್ಲಿ ಅಕ್ರಮವಾಗಿ ಚಿನ್ನ ಸಾಗಾಟ ನಡೆಸಲಾಗಿತ್ತು. ಚಿಕ್ಕಮಗಳೂರು ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.



## ಸಿಎಂ ಜಗನ್ ಭಾವಚಿತ್ರವುಳ್ಳ ವಾಚ್ ಸಾಗಾಟ: 1 ಲಕ್ಷ ಮೌಲ್ಯದ ಕೈ ಗಡಿಯಾರ ಸೀಜ್

ಚಿಕ್ಕಬಳ್ಳಾಪುರ: ನೀತಿ ಸಂಹಿತಿ ಜಾರಿದರೂ ಸಹ ಅಕ್ರಮ ಹಣ, ದುಬಾರಿ ವಸ್ತುಗಳ ಸಾಗಾಟ ಬೆಳಕಿಗೆ ಬರುತ್ತಿದೆ. ಅದರಂತೆಯೇ ಆಂಧ್ರ ಸಿಎಂ ಜಗನ್ ಮೋಹನ್ ರೆಡ್ಡಿ ಚಿತ್ರವುಳ್ಳ ವಾಚ್ಗಳು ಚುನಾವಣಾ ಸಿಬ್ಬಂದಿ ಕೈಗೆ ಸಿಕ್ಕಿದೆ. ಸುಮಾರು 1 ಲಕ್ಷ ರೂಪಾಯಿ ಮೌಲ್ಯದ ವಾಚ್ ಅನ್ನು ಸೀಜ್ ಮಾಡಿದ್ದಾರೆ.

ಚಿಕ್ಕಬಳ್ಳಾಪುರ ಜಿಲ್ಲೆ ಬಾಗೇಪಲ್ಲಿ ಚೆಕ್ ಪೋಸ್ಟ್ ಬಳಿಅಕ್ರಮವಾಗಿ ವಾಚ್ ಸಾಗಿಸಲಾಗುತ್ತಿತ್ತು.

ಆಂಧ್ರ ಸಿಎಂ ಜಗನ್ ಮೋಹನ್ ರೆಡ್ಡಿ ಚಿತ್ರವನ್ನು ಹೊಂದಿರುವ 96 ವಾಚ್ಗಳನ್ನು ಚುನಾವಣಾ ಸಿಬ್ಬಂದಿ ಸೀಜ್ ಮಾಡಿದ್ದಾರೆ.

1 ಲಕ್ಷ ರೂಪಾಯಿ ಮೌಲ್ಯದ ಕೈ ಗಡಿಯಾರಗಳನ್ನ ಜಪ್ತಿ ಮಾಡಿದ್ದಾರೆ.

ವಾಚ್ ಗಳನ್ನು ಅನಂತಪುರದಿಂದ ಬೆಂಗಳೂರಿಗೆ ಕಾರಿನಲ್ಲಿ ಸಾಗಿಸುತ್ತಿದ್ದರು ಎಂದು ತಿಳಿದುಬಂದಿದೆ.

ಅನಂತಪುರದ ವೈಎಸ್‌ಆರ್ ಕಾಂಗ್ರೆಸ್ ಪಾರ್ಟಿಯ ಬಂಡಿ ನಾಗೇಂದ್ರ ಹಾಗೂ ಗನ್ ಮ್ಯಾನ್ ನಾಗೇಂದ್ರ ವಿರುದ್ಧ ಬಾಗೇಪಲ್ಲಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಹಫ್ತಾ ವಸೂಲಿ ಆರೋಪ: ರಾಹುಲ್‌ಗೆ 1,600 ಕೋಟಿ ರೂ. ಎಲ್ಲಿಂದ ಬಂತು: ಅಮಿತ್ ಶಾ ಪ್ರಶ್ನೆ



ನವದೆಹಲಿ: ಚುನಾವಣಾ ಬಾಂಡ್ ಗಳನ್ನು 'ಹಫ್ತಾ ವಸೂಲಿ' ಎಂದು ಕರೆಯುತ್ತಿರುವ ರಾಹುಲ್ ಗಾಂಧಿ 1,600 ಕೋಟಿ ರೂ. ಗಳನ್ನು ಎಲ್ಲಿಂದ ಪಡೆದರು ಎಂಬುದನ್ನು ಸ್ಪಷ್ಟಪಡಿಸಬೇಕಾಗಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಕೇಳಿದ್ದಾರೆ.

ಚುನಾವಣಾ ಬಾಂಡ್ ಗಳ ಮೂಲಕ ಗಾಂಧಿ ಅವರಿಗೂ 1,600 ಕೋಟಿ ರೂ. ಬಂದಿದೆ. ಆ 'ಹಫ್ತಾ ವಸೂಲಿ' ಅವರು ಎಲ್ಲಿಂದ ಪಡೆದರು ಎಂಬುದನ್ನು ಅವರು ಸ್ಪಷ್ಟಪಡಿಸಬೇಕು. ಇದು ಪಾರದರ್ಶಕ ದೇಣಿಗೆ ಎಂದು ನಾವು ಪ್ರತಿಪಾದಿಸುತ್ತೇವೆ, ಆದರೆ ಅವರು ಅದನ್ನು ವಸೂಲಿ ಎಂದು ಹೇಳುವುದಾದರೆ ಅವರು ವಿವರಗಳನ್ನು ನೀಡಬೇಕು ಎಂದು ಶಾ ತಮ್ಮ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿದ ವೀಡಿಯೊದಲ್ಲಿ ಹೇಳಿದ್ದಾರೆ.

ಇತರ ಕೆಲವು ಪಕ್ಷಗಳಂತೆ ಬಿಜೆಪಿಯು ತಮ್ಮ ದಾನಿಗಳ ಪಟ್ಟಿಯನ್ನು ಬಹಿರಂಗಪಡಿಸುತ್ತದೆಯೇ ಎಂದು ಕೇಳಿದಾಗ, ನಿಮಗೆ ಭರವಸೆ ನೀಡುತ್ತೇನೆ, ವಿವರಗಳು ಹೊರಬಂದ ನಂತರ ಇಂಡಿಯಾ ಮೈತ್ರಿಕೂಟ ಸಾರ್ವಜನಿಕರನ್ನು ಎದುರಿಸಲು ಕಷ್ಟವಾಗುತ್ತದೆ" ಎಂದು ಶಾ ಪ್ರತಿಕ್ರಿಯಿಸಿದ್ದಾರೆ. ಭಾರತೀಯ ರಾಜಕೀಯದಲ್ಲಿ ಕಪ್ಪು ಹಣದ ಪ್ರಾಬಲ್ಯವನ್ನು ಕೊನೆಗೊಳಿಸಲು ಚುನಾವಣಾ ಬಾಂಡ್ ಗಳನ್ನು ಪರಿಚಯಿಸಲಾಯಿತು, ಕಪ್ಪು ಹಣವನ್ನು ನಿರ್ಮೂಲನೆ ಮಾಡಲು ಅವುಗಳನ್ನು ತರಲಾಯಿತು. ಈಗ ಈ ಯೋಜನೆಯನ್ನು ರದ್ದುಗೊಳಿಸಲಾಗಿದೆ ಮತ್ತು ಕಪ್ಪು ಹಣ ವಾಪಸಾತಿಗೆ ನಾನು ಹೆದರುತ್ತೇನೆ ಎಂದು ಶಾ ಹೇಳಿದರು.

ಚುನಾವಣಾ ಬಾಂಡ್‌ಗಳನ್ನು ರದ್ದುಪಡಿಸುವ ಬದಲು ಸುಧಾರಣೆಗಳು ಇರಬೇಕು ಎಂದು ನಾನು ನಂಬುತ್ತೇನೆ, ಆದರೆ ಸುಪ್ರೀಂಕೋರ್ಟ್ ತನ್ನ ತೀರ್ಪು ನೀಡಿರುವುದರಿಂದ ಅದು ಯಾವುದೇ ಮಹತ್ವವನ್ನು ಹೊಂದಿಲ್ಲ, ನಾನು ಅದನ್ನು ಗೌರವಿಸುತ್ತೇನೆ" ಎಂದು ಅವರು ಹೇಳಿದರು.

## ಎಲ್‌ಪಿಜಿ ಗ್ಯಾಸ್ ಸೋರಿಕೆ; ದಂಪತಿ, ಮೂವರು ಮಕ್ಕಳು ಸಜೀವ ದಹನ



ಜೈಪುರ: ರಾಜಸ್ಥಾನದ ಜೈಪುರದಲ್ಲಿ ಗುರುವಾರ ಎಲ್‌ಪಿಜಿ ಸಿಲಿಂಡರ್ ಬದಲಾಯಿಸುವ ವೇಳೆ ಮನೆಯಲ್ಲಿ ಗ್ಯಾಸ್ ಸೋರಿಕೆಯಾಗಿ ಬೆಂಕಿ ಕಾಣಿಸಿಕೊಂಡಿದ್ದು, ಅವಘಡದಲ್ಲಿ ಯುವ ದಂಪತಿಗಳು ಮತ್ತು ಅವರ ಮೂವರು ಮಕ್ಕಳು ಸಜೀವ ದಹನಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.


ಜೈಪುರದ ವಿಶ್ವಕರ್ಮ ಪೊಲೀಸ್ ಠಾಣಾ ವ್ಯಾಪ್ತಿಯ ಬಾಡಿಗೆ ಮನೆಯಲ್ಲಿ ಈ ದುರಂತ ಸಂಭವಿಸಿದ್ದು, ಮನೆಯಲ್ಲಿದ್ದ ಯಾರೂ ತಪ್ಪಿಸಿಕೊಳ್ಳಲು ಸಾಧ್ಯವಾಗಲಿಲ್ಲ ಎಂದು ಅವರು ಹೇಳಿದ್ದಾರೆ. ಬೆಳಗ್ಗೆ ರಾಜೇಶ್ ಯಾದವ್(25) ಗ್ಯಾಸ್ ಸಿಲಿಂಡರ್ ಬದಲಾಯಿಸುತ್ತಿದ್ದಾಗ ಈ ಘಟನೆ ಸಂಭವಿಸಿದೆ ಎಂದು ಎಸ್‌ಎಚ್‌ಒ ರಾಜೇಂದ್ರ ಕುಮಾರ್ ತಿಳಿಸಿದ್ದಾರೆ.

ಸಿಲಿಂಡರ್‌ನಿಂದ ಗ್ಯಾಸ್ ಸೋರಿಕೆಯಾಗಿದ್ದು, ಇದ್ದಕ್ಕಿದ್ದಂತೆ ಬೆಂಕಿ ಕಾಣಿಸಿಕೊಂಡಿದೆ ಎಂದು ಅವರು ಹೇಳಿದ್ದಾರೆ.

ಯಾದವ್, ಅವರ ಪತ್ನಿ ರೂಬಿ(24), ಅವರ ಪುತ್ರಿಯರಾದ ಇಶು(7), ಖುಷಿಮಣಿ (4) ಮತ್ತು ಮಗ ದಿಲ್ಖುಷ್(2) ಕೋಣೆಯಲ್ಲಿದ್ದರು ಮತ್ತು ಅವರಲ್ಲಿ ಯಾರೂ ಹೊರಗೆ ಬರಲು ಸಾಧ್ಯವಾಗಲಿಲ್ಲ ಎಂದು ಎಸ್‌ಎಚ್‌ಒ ತಿಳಿಸಿದ್ದಾರೆ.

ಒಟ್ಟು 17–18 ಕೊಠಡಿಗಳಿರುವ ವಸತಿ ಕಟ್ಟಡದ ಕೊಠಡಿಯೊಂದರಲ್ಲಿ ಈ ಕುಟುಂಬ ವಾಸಿಸುತ್ತಿತ್ತು ಎಂದು ಎಸ್‌ಎಚ್‌ಒ ಹೇಳಿದ್ದಾರೆ. ಬಿಹಾರದ ಮೋತಿಹಾರಿ ಮೂಲದ ಯಾದವ್, ಕಾರ್ಖಾನೆಯೊಂದರಲ್ಲಿ ಕೆಲಸ ಮಾಡುತ್ತಿದ್ದರು ಮತ್ತು ಕಳೆದ ನಾಲ್ಕು ತಿಂಗಳಿನಿಂದ ಅಲ್ಲಿಯೇ ವಾಸಿಸುತ್ತಿದ್ದರು ಎಂದು ಅಧಿಕಾರಿ ತಿಳಿಸಿದ್ದಾರೆ. ಘಟನೆಯಿಂದ ಬೇರೆ ಇತರ ಯಾವುದೇ ಕೊಠಡಿಗೆ ಹಾನಿಯಾಗಿಲ್ಲ. ಅಗ್ನಿಶಾಮಕ ದಳದವರು ಬೆಂಕಿ ನಂದಿಸಿದ್ದು, ಮೃತದೇಹವನ್ನು ಆಸ್ಪತ್ರೆಯ ಶವಾಗಾರಕ್ಕೆ ರವಾನಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## ಕಾಂಗ್ರೆಸ್ ನೈತಿಕವಾಗಿ ದಿವಾಳಿಯಾಗಿದೆ, ಆರ್ಥಿಕವಾಗಿ ಅಲ್ಲ: ಬಿಜೆಪಿ



ನವದೆಹಲಿ: ಪಕ್ಷದ ಬ್ಯಾಂಕ್ ಖಾತೆಗಳು ಸ್ಥಗಿತಗೊಂಡಿರುವುದಕ್ಕೆ ಸುದ್ದಿಗೋಷ್ಠಿಯನ್ನುದ್ದೇಶಿಸಿ ಆರೋಪ ಮಾಡಿರುವ ಕಾಂಗ್ರೆಸ್ ನಾಯಕರ ವಿರುದ್ಧ ಬಿಜೆಪಿ ರಾಷ್ಟ್ರಾಧ್ಯಕ್ಷ ಜೆಪಿ ನಡ್ಡಾ ವಾಗ್ದಾಳಿ ನಡೆಸಿದ್ದಾರೆ. ಟ್ವೀಟ್ ಮಾಡಿರುವ ಜೆಪಿ ನಡ್ಡಾ, ಕಾಂಗ್ರೆಸ್ ನ್ನು ಜನ ಈ ಬಾರಿಯ ಚುನಾವಣೆಯಲ್ಲಿ ಸಂಪೂರ್ಣ ತಿರಸ್ಕರಿಸಲಿದ್ದಾರೆ ಹಾಗೂ ಐತಿಹಾಸಿಕ ಸೋಲನ್ನು ಎದುರಿಸುವ ಭಯದಿಂದ ಕಾಂಗ್ರೆಸ್ ನಾಯಕರು ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿ ಭಾರತದ ಪ್ರಜಾಪ್ರಭುತ್ವ ಹಾಗೂ ಸಂಸ್ಥೆಗಳ ಬಗ್ಗೆ ಮನಸೋ ಇಚ್ಛೆ ಮಾತನಾಡಿದ್ದಾರೆ, ತಮ್ಮ ಅಸ್ತಿತ್ವ ಕಳೆದುಕೊಳ್ಳುವ ಭೀತಿಯನ್ನು ಆರ್ಥಿಕ ಸಂಕಷ್ಟದ ಮೇಲೆ ದೂರುತ್ತಿದ್ದಾರೆ ಎಂದು ಜೆಪಿ ನಡ್ಡಾ ಟ್ವಿಟರ್ ನಲ್ಲಿ ಆರೋಪಿಸಿದ್ದಾರೆ.

ಕಾಂಗ್ರೆಸ್ ಗೆ ಎದುರಾಗಿರುವುದು ನೈತಿಕ ಹಾಗೂ ಬೌದ್ಧಿಕ ದಿವಾಳಿತನ ಆರ್ಥಿಕ ದಿವಾಳಿತನವಲ್ಲ ಎಂದು ಜೆಪಿ ನಡ್ಡಾ ಹೇಳಿದ್ದಾರೆ. ಅವರ ಪೋಸ್ಟ್, "ತಮ್ಮ ತಪ್ಪುಗಳನ್ನು ಸರಿಪಡಿಸಿಕೊಳ್ಳುವ ಬದಲು, ಕಾಂಗ್ರೆಸ್ ತಮ್ಮ ತೊಂದರೆಗಳಿಗೆ ಅಧಿಕಾರಿಗಳನ್ನು ದೂಷಿಸುತ್ತಿದೆ.

ಅದು ಐಟಿಎಟಿ ಅಥವಾ ದೆಹಲಿ ಹೈಕೋರ್ಟ್ ಆಗಿರಲಿ, ಅವರು ಕಾಂಗ್ರೆಸ್ ಅನ್ನು ನಿಯಮಗಳನ್ನು ಅನುಸರಿಸಲು, ಬಾಕಿ ತೆರಿಗೆ ಪಾವತಿಸಲು ಕೇಳಿದ್ದಾರೆ ಆದರೆ ಪಕ್ಷವು ಹಾಗೆ ಮಾಡಲಿಲ್ಲ.

"ಪ್ರತಿಯೊಂದು ಕ್ಷೇತ್ರದಿಂದ, ಪ್ರತಿ ರಾಜ್ಯದಲ್ಲಿ ಮತ್ತು ಇತಿಹಾಸದ ಪ್ರತಿ ಕ್ಷಣದಲ್ಲಿ ಲೂಟಿ ಮಾಡಿದ ಪಕ್ಷ ಆರ್ಥಿಕ ಅಸಹಾಯಕತೆಯ ಬಗ್ಗೆ ಮಾತನಾಡುವುದು ಹಾಸ್ಯಾಸ್ಪದವಾಗಿದೆ. ಜೀಪ್‌ನಿಂದ ಪ್ರಾರಂಭಿಸಿ ಚಾಪರ್ ಹಗರಣದವರೆಗಿನ ಎಲ್ಲಾ ಹಗರಣಗಳಿಂದ ಕೂಡಿದ ಹಣವನ್ನು ಕಾಂಗ್ರೆಸ್ ತನ್ನ ಚುನಾವಣಾ ಪ್ರಚಾರಕ್ಕಾಗಿ ಬಳಸಬಹುದು. ," ಎಂದು ಬಿಜೆಪಿ ರಾಷ್ಟ್ರಾಧ್ಯಕ್ಷ ಜೆಪಿ ನಡ್ಡಾ ಹೇಳಿದ್ದಾರೆ.

ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಗೆ ತಿರುಗೇಟು ನೀಡಿದ ನಡ್ಡಾ, "ಕಾಂಗ್ರೆಸ್‌ನ ಅರೆಕಾಲಿಕ ನಾಯಕರು ಭಾರತದಲ್ಲಿ ಪ್ರಜಾಪ್ರಭುತ್ವವಿದೆ ಎಂಬುದು ಸುಳ್ಳು ಎಂದು ಹೇಳುತ್ತಾರೆ – 1975 ಮತ್ತು 1977 ರ ನಡುವೆ ಕೆಲವೇ ತಿಂಗಳುಗಳ ಸಮಯದಲ್ಲಿ ಭಾರತ ಪ್ರಜಾಪ್ರಭುತ್ವವಾಗಿರಲಿಲ್ಲ ಎಂಬುದನ್ನು ನಾನು ಅವರಿಗೆ ವಿನಮ್ರವಾಗಿ ನೆನಪಿಸುತ್ತೇನೆ. ಆ ಅವಧಿಯಲ್ಲಿ ಭಾರತದ ಪ್ರಧಾನಿ ಬೇರೆ ಯಾರೂ ಅಲ್ಲ, ಶ್ರೀಮತಿ ಇಂದಿರಾ ಗಾಂಧಿ ಎಂದು ನಡ್ಡಾ ಕಾಂಗ್ರೆಸ್ ಗೆ ತಿರುಗೇಟು ನೀಡಿದ್ದಾರೆ.

## ಪಿಎಸ್‌ಐ 402 ಹುದ್ದೆಗಳ ನೇಮಕಾತಿ ಲಿಖಿತ ಪರೀಕ್ಷೆ ಮುಂದೂಡಿಕೆ



ಬೆಂಗಳೂರು: ಲೋಕಸಭೆ ಚುನಾವಣೆ ಹಿನ್ನೆಲೆ 402 ಕಖಖ ಹುದ್ದೆಗಳ ಲಿಖಿತ ಪರೀಕ್ಷೆ ಮುಂದೂಡಿಕೆ ಮಾಡಲಾಗಿದೆ. ಮೇ 8 ರಂದು ನಿಗದಿಯಾಗಿದ್ದ ಪಿಎಸ್‌ಐ ನೇಮಕಾತಿ ಪರೀಕ್ಷೆಯನ್ನು ಮುಂದೂಡಿಕೆ ಮಾಡಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಆದೇಶ ಹೊರಡಿಸಿದೆ. ಅಲ್ಲದೆ, ಶೀಘ್ರದಲ್ಲೇ ಮುಂದಿನ ದಿನಾಂಕವನ್ನು ಪ್ರಾಧಿಕಾರದ ವೆಬ್ಸೈಟ್ನಲ್ಲಿ ಪ್ರಕಟಿಸುವುದಾಗಿ ತಿಳಿಸಿದೆ.

2021ನೇ ಸಾಲಿನಲ್ಲಿ ಅಧಿಸೂಚಿಸಿದ್ದ ಹುದ್ದೆಗಳು ಇವಾಗಿದ್ದು, ಮೇ 8 ರಂದು ಲಿಖಿತ ಪರೀಕ್ಷೆ ನಡೆಸಲು ದಿನಾಂಕ ನಿಗದಿ ಮಾಡಲಾಗಿತ್ತು. ಈ ವೇಳಾಪಟ್ಟಿಗೆ ಯಾವುದೇ ಆಕ್ಷೇಪಣೆ ಹಾಗೂ ಆಡಳಿತಾತ್ಮಕ ಸಮಸ್ಯೆಗಳು ಎದುರಾಗದಿದ್ದಲ್ಲಿ ಇದೇ ದಿನಾಂಕದಂದು ಪರೀಕ್ಷೆ ನಡೆಸಲು ನಿರ್ಧರಿಸಲಾಗಿತ್ತು.

ಸಹಿಷ್ಣುತೆ ಪರೀಕ್ಷೆ ಹಾಗೂ ದೇಹದಾರ್ಢ್ಯತೆ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿದವರಿಗೆ ಲಿಖಿತ ಪರೀಕ್ಷೆ ಬರೆಯಲು ಅವಕಾಶ ಇರುತ್ತದೆ. ಒಟ್ಟು ಎರಡು ರೀತಿಯ ಪ್ರಶ್ನೆ ಪತ್ರಿಕೆಗಳು ಇರಲಿವೆ. ಮೊದಲ ಪತ್ರಿಕೆ ಪ್ರಬಂಧ, ಸಾರಂಶ, ಭಾಷಾಂತರ ಪ್ರಶ್ನೆಗಳನ್ನು ಒಳಗೊಂಡಿರುತ್ತದೆ. ಎರಡನೇ ಪತ್ರಿಕೆಯು ವಸ್ತುನಿಷ್ಟ ಮಾದರಿಯದಾಗಿದ್ದು, ಬಹುವಿಧ ಆಯ್ಕೆ ಉತ್ತರಗಳ ಲಿಖಿತ ಪರೀಕ್ಷೆ ಇರುತ್ತದೆ. ಎರಡೂ ಪ್ರಶ್ನೆ ಪತ್ರಿಕೆಗಳು ಕನ್ನಡ ಮತ್ತು ಇಂಗ್ಲಿಷ್ನಲ್ಲಿ ಇರಲಿದೆ.

## ಬೆಳಗಾವಿಯಲ್ಲಿ ಬಸ್ ಚಾಲಕನಿಗೆ ಏರ್ ಗನ್ ತೋರಿಸಿದ ಕಾರು ಚಾಲಕ



ಬೆಳಗಾವಿ: ಕಾರ್ ಚಾಲಕನೊಬ್ಬ ಕೆಎಸ್ ಆರ್ ಟಿಸಿ ಡ್ರೈವರ್ ಗೆ ಏರ್ ಗನ್ ತೋರಿಸಿ ದಾದಾಗಿರಿ ಪ್ರದರ್ಶಿಸಿರುವ ಘಟನೆ ಬೆಳಗಾವಿ ಆರ್‌ಎನ್ ಶೆಟ್ಟಿ ಕಾಲೇಜು ಸರ್ಕಲ್ ಬಳಿ ಮಧ್ಯಾಹ್ನ ನಡೆದಿದೆ.

ಕೆಎಸ್ ಆರ್ ಟಿಸಿ ಬಸ್ ಗೆ ಕಾರು ಎದುರು ಆಗಿದೆ. ಆಗ ಕಾರಿನಲ್ಲಿದ್ದ ಅಜಂ ನಗರದ ಮಹಮ್ಮದ್ ಷರೀಫ್ ಕೆಎಸ್ ಆರ್ ಟಿಸಿ ಬಸ್ ಚಾಲಕ ಮಲ್ಲಿಕಾರ್ಜುನ ಅಂಕಲಿ ಇಬ್ಬರ ನಡುವೆ ಅವಾಚ್ಯ ಶಬ್ದಗಳಿಂದ ನಿಂದನೆ ನಡೆದಿದೆ. ಆಗ ಇಬ್ಬರೂ ಪರಸ್ಪರ ಬೈದಾಡಿಕೊಂಡಿದ್ದಾರೆ. ಪರಿಸ್ಥಿತಿ ವಿಕೋಪಕ್ಕೆ ಹೋಗುತ್ತಿದ್ದಂತೆ ಷರೀಫ್ ತನ್ನ ಬಳಿ ಇದ್ದ ಏರ್ ಗನ್ ತೋರಿಸಿ ಗೂಂಡಾಗಿರಿ ಪ್ರದರ್ಶಿಸಿದ್ದಾನೆ. ಈ ಸಂಬಂಧ ಮಾಳಮಾರುತಿ ಠಾಣೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಆರೋಪಿ ಷರೀಫ್ ನನ್ನು ವಶಕ್ಕೆ ಪಡೆದುಕೊಂಡು ವಿಚಾರಣೆ ಆರಂಭಿಸಿದ್ದು, ಆತನ ಬಳಿ ಇದ್ದ ಏರ್ ಗನ್ ಪರವಾನಿಗಿ ಹೊಂದಿದೆಯೋ ಇಲ್ಲವೋ ಎಂಬ ಬಗ್ಗೆ ಪೊಲೀಸರು ಹೆಚ್ಚಿನ ತನಿಖೆ ಕೈಗೊಂಡಿದ್ದಾರೆ.

## ಸಂಸದ ಬಿ.ಎನ್.ಬಚ್ಚೇಗೌಡ ಬಿಜೆಪಿಗೆ ರಾಜೀನಾಮೆ




ಚಿಕ್ಕಬಳ್ಳಾಪುರ: ಬಿಜೆಪಿ ಪಕ್ಷದ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ಸಲ್ಲಿಸುತ್ತಿದ್ದೇನೆ ಎಂದು ಹಾಲಿ ಸಂಸದ ಬಿ.ಎನ್.ಬಚ್ಚೇಗೌಡ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ರಾಜ್ಯಾಧ್ಯಕ್ಷ ವಿಜಯೇಂದ್ರಗೆ ರಾಜೀನಾಮೆ ಪತ್ರ ರವಾನಿಸಿದ್ದೇನೆ ಎಂದರು.

'ಸ್ವ ಇಚ್ಛೆಯಿಂದ ಬಿಜೆಪಿ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ಸಲ್ಲಿಸುತ್ತಿದ್ದೇನೆ. ರಾಜೀನಾಮೆ ಅಂಗೀಕರಿಸಬೇಕು ಎಂದು ಕೋರುತ್ತೇನೆ' ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ಆದರೆ ಚುನಾವಣೆಯಲ್ಲಿ ಯಾರ ಪರವೂ ಕೆಲಸ ಮಾಡದಿರಲು ನಿರ್ಧಾರ ಮಾಡಿದ್ದಾರೆ. 2008ರಲ್ಲಿ ಬಿಜೆಪಿ ಪ್ರಾಥಮಿಕ ಸದಸ್ಯತ್ವ ಪಡೆದು ಶಾಸಕ, ಸಚಿವ, ಸಂಸದನಾಗಿ ಸಾರ್ವಜನಿಕ ಕೆಲಸ ಮಾಡಲು ಅವಕಾಶ ಮಾಡಿಕೊಟ್ಟ ಪಕ್ಷಕ್ಕೆ ಮತ್ತು ಪಕ್ಷದ ಹಿರಿಯ ಮುಖಂಡರಿಗೆ ಧನ್ಯವಾದ ಅರ್ಪಿಸುವುದಾಗಿ ಹೇಳಿದ್ದಾರೆ. ಕಳೆದ ಬಾರಿ ಚಿಕ್ಕಬಳ್ಳಾಪುರ ಲೋಕಸಭಾ ಚುನಾವಣೆಯಲ್ಲಿ ಗೆಲುವು ಸಾಧಿಸಿದ್ದ ಬಚ್ಚೇಗೌಡ ಅವರು ಕಾಂಗ್ರೆಸ್‌ನ ವೀರಪ್ಪ ಮೊಯ್ಲಿ ಅವರನ್ನು ಹೆಚ್ಚು ಮತಗಳ ಅಂತರದಿಂದ ಸೋಲಿಸಿದ್ದರು.

ಬಿ.ಎನ್.ಬಚ್ಚೇಗೌಡ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ತಾಲ್ಲೂಕಿನ ಬೆಂಡಗಾನಹಳ್ಳಿ ಗ್ರಾಮದವರು. 82 ವರ್ಷದ ಬಿ.ಎನ್.ಬಚ್ಚೇಗೌಡ ಪ್ರಸ್ತುತ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಬಿಜೆಪಿಯ ಸಂಸದರಾಗಿದ್ದಾರೆ. ಈ ಬಾರಿ ಟಿಕೆಟ್ ದೊರಕುವುದಿಲ್ಲ ಎಂಬುದು ಖಚಿತವಾಗುತ್ತಿದ್ದಂತೆ ಬಿ ಎನ್ ಬಚ್ಚೇಗೌಡ ಅವರು ಚುನಾವಣಾ ನಿವೃತ್ತಿ ಘೋಷಿಸಿದ್ದರು. ಪಕ್ಷದ ಸಂಘಟನೆ ಹಾಗೂ ಚಟುವಟಿಕೆಗಳಿಂದ ದೂರ ಉಳಿದಿದ್ದರು. ಬಚ್ಚೇಗೌಡ ಅವರ ಮಗ ಶರತ್ ಬಚ್ಚೇಗೌಡ ಹೊಸಕೋಟೆ ವಿಧಾನಸಭಾ ಕ್ಷೇತ್ರದಿಂದ ಕಾಂಗ್ರೆಸ್ ಪಕ್ಷದ ಶಾಸಕರಾಗಿ ಆಯ್ಕೆಯಾಗಿದ್ದಾರೆ. ಶಾಸಕ ಶರತ್ ಬಚ್ಚೇಗೌಡರ ಮಾವ ಕೆ.ಎಚ್. ಪುಟ್ಟಸ್ವಾಮಿಗೌಡ ಗೌರಿಬಿದನೂರು ವಿಧಾನಸಭಾ ಕ್ಷೇತ್ರದ ಪಕ್ಷೇತರ ಶಾಸಕರಾಗಿದ್ದು ಕಾಂಗ್ರೆಸ್ ಸಂಪರ್ಕದಲ್ಲಿದ್ದಾರೆ.

## 85 ವರ್ಷ ಮೇಲ್ಪಟ್ಟವರಿಗೆ ಮನೆಯಿಂದಲೇ ವೋಟಿಂಗ್ ಗೆ ಅವಕಾಶ




ಬೆಂಗಳೂರು: ಲೋಕಸಭಾ ಚುನಾವಣೆಯಲ್ಲಿ 85 ವರ್ಷ ಮೇಲ್ಪಟ್ಟವರು ಹಾಗೂ ಅಂಗವಿಕಲರು ತಮ್ಮ ಮನೆಗಳಿಂದಲೇ ಮತದಾನ ಮಾಡಲು ಅವಕಾಶ ನೀಡಿದ್ದು, ಇಂತಹವರ ಪಟ್ಟಿಯನ್ನು ಸಿದ್ಧಪಡಿಸುವ ಹೊಣೆಯನ್ನು ಬೂತ್ ಮಟ್ಟದ ಅಧಿಕಾರಿ/ಸಿಬ್ಬಂದಿಗಳಿಗೆ ವಹಿಸಲಾಗಿದೆ.

ಬೆಂಗಳೂರು ಜಿಲ್ಲಾ ಚುನಾವಣಾಧಿಕಾರಿಯವರ ವ್ಯಾಪ್ತಿಗೆ ಬರುವ ಬೆಂಗಳೂರು ಉತ್ತರ, ಕೇಂದ್ರ ಹಾಗೂ ದಕ್ಷಿಣ ಸೇರಿ 3 ಲೋಕಸಭಾ ಕ್ಷೇತ್ರಗಳಲ್ಲಿ ಮತದಾರರ ಪಟ್ಟಿಯಲ್ಲಿರುವ 85 ವರ್ಷಕ್ಕಿಂತ ಮೇಲ್ಪಟ್ಟ ಹಾಗೂ ಅಂಗವಿಕಲರಿಗೆ (ಶೇ.40ಕ್ಕಿಂತ ಹೆಚ್ಚು ಅಂಗವೈಕಲ್ಯ ಹೊಂದಿರುವವರು) ಅಂಚೆ ಮತದಾನಕ್ಕೆ ಅವಕಾಶ ಕಲ್ಪಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಬೂತ್ ಮಟ್ಟದ ಅಧಿಕಾರಿ/ಸಿಬ್ಬಂದಿಗಳು ಗುರುವಾರದಿಂದ (ಮಾ. 21) ಮತದಾರರ ಪಟ್ಟಿಯನ್ವಯ ಮನೆ–ಮನೆ ಭೇಟಿ ನೀಡಿ ನಮೂನೆ 12ಡಿ ಮೂಲಕ ಅರ್ಹರ ಮಾಹಿತಿಯನ್ನು ಭರ್ತಿ ಮಾಡಿಕೊಳ್ಳಲು ಚಾಲನೆ ನೀಡಲಾಗುತ್ತಿದೆ. ಒಮ್ಮೆ ಈ ಸೌಲಭ್ಯ ಹೊಂದಲು ಅರ್ಜಿಗೆ ಸಹಿ ಹಾಕಿದ ಬಳಿಕ ಅಂತಹವರು ಮತಗಟ್ಟೆಗೆ ತೆರಳಿ ಮತ ಚಲಾಯಿಸುವ ಅವಕಾಶ ಇರುವುದಿಲ್ಲ. ಆದರೆ, ಸೌಲಭ್ಯ ನಿರಾಕರಿಸುವವರು ಎಂದಿನಂತೆ ತಮ್ಮ ವ್ಯಾಪ್ತಿಯ ಮತಗಟ್ಟೆಗೆ ತೆರಳಿ ವೋಟಿಂಗ್ ಮಾಡಲು ಅವಕಾಶ ಇದೆ.

ವೆಬ್ಸೈಟ್ ಮೂಲಕ ನೋಂದಣಿಗೆ ಅವಕಾಶ: ಬಿಬಿಎಂಪಿ ವ್ಯಾಪ್ತಿಯಲ್ಲಿ 85 ವರ್ಷ ಮೇಲ್ಪಟ್ಟ ಹಾಗೂ ಅಂಗವಿಕಲರ ಮನೆ–ಮನೆಗೆ ಭೇಟಿ ನೀಡಿದ ಸಂದರ್ಭದಲ್ಲಿ ನಮೂನೆ 12ಡಿ ಪಡೆದು ದೃಢೀಕರಿಸಲು ಸಾಧ್ಯವಾಗದಿದ್ದಲ್ಲಿ ಚುನಾವಣಾ ಆಯೋಗದ ವೆಬ್‌ಸೈಟ್ಗೆ ಭೇಟಿ ನೀಡಿ ಅಗತ್ಯ ನಮೂನೆಯನ್ನು ಭರ್ತಿ ಮಾಡಿ ಸಂಬಂಧಿಸಿದ ಚುನಾವಣಾಧಿಕಾರಿಗಳಿಗೆ ನೇರವಾಗಿ ಸಲ್ಲಿಸುವ ಅವಕಾಶ ಇದೆ ಎಂದು ನಗರ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಪಾಲಿಕೆಯ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ತಿಳಿಸಿದ್ದಾರೆ.

## ಲೋಕಸಭೆ ಚುನಾವಣೆಯಲ್ಲಿ ಕಾರ್ಯಕರ್ತರ ಪಾತ್ರ ಬಹಳ ಮುಖ್ಯ: ಸಚಿವ ಸತೀಶ್ ಜಾರಕಿಹೊಳಿ




ಹುಕ್ಕೇರಿ: ಕಳೆದ ಹತ್ತು ವರ್ಷಗಳಲ್ಲಿ ಕೇಂದ್ರದಲ್ಲಿ ಅಧಿಕಾರದಲ್ಲಿರುವ ಬಿಜೆಪಿ ಸರ್ಕಾರ ಪಾಕಿಸ್ತಾನ,ರಾಮ ಮಂದಿರ ಮತ್ತು ಸರ್ಜಿಕಲ್ ಸ್ಟ್ರೈಕ್ ಹೆಸರಿನಲ್ಲಿ ಪ್ರಚಾರ ಗಿಟ್ಟಿಸಿಕೊಂಡಿದೆ.ಆದರೆ ನಾವು ರಾಜ್ಯದಲ್ಲಿ ಚುನಾವಣೆ ಪೂರ್ವ ನೀಡಿದ ಭರವಸೆಗಳನ್ನು ಸಂಪೂರ್ಣವಾಗಿ ಜಾರಿಗೆ ತರುವ ಮೂಲಕ ಜನತೆಗೆ ನೀಡಿದ ಭರವಸೆಗಳನ್ನ ಈಡೇಸಿದ್ದೆವೆ ಎಂದು ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ಪಟ್ಟಣದ ನೇಸರಿ ಗಾರ್ಡನ್ ದಲ್ಲಿ ಗುರುವಾರ ಚಿಕ್ಕೋಡಿ ಲೋಕಸಭಾ ಚುನಾವಣಾ ನಿಮಿತ್ತ ಏರ್ಪಡಿಸಿದ್ದ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಸಿಎಂ ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ ಅವರ ನೇತೃತ್ವದಲ್ಲಿ ಕಾಂಗ್ರೆಸ್ ಪಕ್ಷ ನುಡಿದಂತೆ ನಡೆಯುತ್ತಿದೆ.ಗ್ಯಾರಂಟಿ ಯೋಜನೆಗಳ ಕುರಿತು ಬಗ್ಗೆ ಜನರಿಗೆ ಮಾಹಿತಿ ನೀಡಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯನ್ನ ಬೆಂಬಲಿಸುವಂತೆ ಮನವರಿಕೆ ಮಾಡಬೇಕೆಂದು ಮನವಿ ಮಾಡಿಕೊಂಡರು.

ಚಿಕ್ಕೋಡಿ ಲೋಕಸಭಾ ವ್ಯಾಪ್ತಿಯಲ್ಲಿ ಕಾಂಗ್ರೆಸ್ ಪರ ಒಲವು ಇದ್ದು,ಮತದಾರರು ಕಾಂಗ್ರೆಸ್‌ಗೆ ಹೆಚ್ಚಿನ ಮತ ಚಲಾಯಿಸುವುದರ ಮೂಲಕ ಗೆಲುವಿಗೆ ಸಹಕರಿಸಬೇಕು. ಕಾಂಗ್ರೆಸ್ ಅಭ್ಯರ್ಥಿ ಯಾರೆ ಆದರು,–ಎಲ್ಲರೂ ಕಾಂಗ್ರೆಸ್ ಗೆಲುವಿಗೆ ಸನ್ನದ್ದರಾಗಬೇಕು,ಚುನಾವಣೆಯಲ್ಲಿ ಕಾರ್ಯಕರ್ತರು ಪಾತ್ರ ಬಹಳ ಮುಖ್ಯ ಎಂದರು.

ಬುಡಾ ನೂತನ ಅಧ್ಯಕ್ಷ ಲಕ್ಷ್ಮಣರಾವ್ ಚಿಂಗಳೆ ಮಾತನಾಡಿ,ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳು ಸಮರ್ಪಕವಾಗಿ ಅನುಷ್ಠಾನಗೊಳಿಸಲಾಗಿದ್ದು,ಬಡ ಜನರ ಪರ ಯೋಜನೆ ರೂಪಿಸಿ ಯಶಸ್ವಿಯಾಗಿರುವ ಕಾಂಗ್ರೆಸ್ ಪಕ್ಷದ ಪರ ರಾಜ್ಯದಲ್ಲಿ ಗಾಳಿ ಬಿಸುತ್ತಿದ್ದು,ಸಚಿವ ಸತೀಶ ಜಾರಕಿಹೋಳಿ ಅವರ ಸಾಮಾಜಿಕ ನ್ಯಾಯ ಪರ ಕಾರ್ಯ ನಿರ್ವಹಿಸಿದ್ದಾರೆ.ಈ ಬಾರಿ ಚಿಕ್ಕೋಡಿಯಲ್ಲಿ ಕಾಂಗ್ರೆಸ್ ಗೆಲುವಿಗೆ ಶ್ರಮಿಸೋಣ ಎಂದರು.

ಮಾಜಿ ಸಚಿವ ಎ.ಬಿ.ಪಾಟೀಲ ಮಾತನಾಡಿ ಕಳೆದ ಹತ್ತು ವರ್ಷದಿಂದ ಕೇಂದ್ರದಲ್ಲಿ ಅಧಿಕಾರದಲ್ಲಿರುವ ಬಿಜೆಪಿ ಪಕ್ಷ ಯಾವುದೇ ಅಭಿವೃದ್ಧಿ ಕಾರ್ಯ ಮಾಡಿಲ್ಲ,ಸುಳ್ಳು ಆಶ್ವಾಸನೆ ನೀಡುತ್ತಾ ಬಂದಿದ್ದಾರೆ.ಆದರೆ ರಾಜ್ಯದಲ್ಲಿ ಕಾಂಗ್ರೆಸ್ ಚುನಾವಣೆ ಪೂರ್ವ ನೀಡಿದ್ದ ಭರವಸೆಗಳನ್ನ ಈಡೇರಿಸಿದ್ದು,ಲೋಕಸಭಾ ಚುನಾವಣೆಯಲ್ಲಿ ಹೆಚ್ಚಿನ ಮತ ಕಾಂಗ್ರೆಸ್ ಪಕ್ಷಕ್ಕೆ ನೀಡುವಂತೆ ಕರೆ ನೀಡಿದರು.

ಮಾಜಿ ಸಚಿವ ಶಶಿಕಾಂತ ನಾಯಿಕ ಮಾತನಾಡಿ ಕಾಂಗ್ರೆಸ್ ಕಾರ್ಯಕರ್ತರು ಸಣ್ಣ ಪುಟ್ಟ ಸಮಸ್ಯೆಗಳನ್ನ ಬದಿಗಿಟ್ಟು ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಧಿಕೃತ ಅಭ್ಯರ್ಥಿಯನ್ನ ಗೆಲ್ಲಿಸುವ ಕಾರ್ಯ ಮಾಡಬೇಕು ಎಂದು ಮನವಿ ಮಾಡಿಕೊಂಡರು.

ಜಿಲ್ಲಾ ಕಾರ್ಮಿಕ ಘಟಕದ ಅಧ್ಯಕ್ಷ ಮಹೇಶ ಹಟ್ಟಿಹೋಳಿ, ಸಂಕೇಶ್ವರ ಬ್ಲಾಕ್ ಅದ್ಯಕ್ಷ ಸಂತೋಷ ಮುಡಶಿ, ಹುಕ್ಕೇರಿ ಬ್ಲಾಕ್ ಅದ್ಯಕ್ಷ ವಿಜಯ ರವದಿ, ಪುರಸಭೆ ಸದಸ್ಯರಾದ ಡಾ.ಜಯಪ್ರಕಾಶ ಕರಜಗಿ, ವಿನೋದ ನಾಯಿಕ, ದಿಲೀಪ್ ಹೊಸಮನಿ, ಚಿದಾನಂದ ಕರದನ್ನವರ, ಮಾರುತಿ ಕುಂದಿ ಇದ್ದರು.

## ಅಬಕಾರಿ ಪೊಲೀಸ್ ಅಧಿಕಾರಿಗಳಿಂದ ದಾಳಿ: ಮದ್ಯ ವಶ



ಬಳ್ಳಾರಿ: ಲೋಕಸಭೆ ಸಾರ್ವತ್ರಿಕ ಚುನಾವಣೆ ಹಿನ್ನಲೆಯಲ್ಲಿ ನೀತಿ ಸಂಹಿತೆ ಜಾರಿಯಾಗಿರುವುದರಿಂದ, ಬುಧವಾರದಂದು ಅಬಕಾರಿ ಪೊಲೀಸ್ ಅಧಿಕಾರಿಗಳು ವಿವಿಧೆಡೆ ದಾಳಿ ನಡೆಸಿ ಅಕ್ರಮ ಮದ್ಯ ಸಾಗಾಣಿಕೆ ಮಾಡುತ್ತಿದ್ದ ಇಬ್ಬರು ವ್ಯಕ್ತಿಗಳನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಲಾಗಿದೆ ಎಂದು ಅಬಕಾರಿ ಉಪ ಆಯುಕ್ತ ಎನ್. ಮಂಜುನಾಥ ಅವರು ತಿಳಿಸಿದ್ದಾರೆ.

ಕಂಪ್ಲಿ ಪಟ್ಟಣದ ಕಂಪ್ಲಿ–ಬಳ್ಳಾರಿ ರಸ್ತೆಯಲ್ಲಿ ರಸ್ತೆಗಾವಲು ಮಾಡುವ ಸಮಯದಲ್ಲಿ ಟಿವಿಎಸ್ ಎಕ್ಸ್ಎಲ್ ಸೂಪರ್ ಹೆವಿಡ್ಯೂಟಿ ಕಪ್ಪು ಮತ್ತು ಹಸಿರು ಬಣ್ಣದ ದ್ವಿಚಕ್ರ ವಾಹನದಲ್ಲಿ 17.280 ಲೀ. (ಅಂದಾಜು ಮೌಲ್ಯ ರೂ.27700) ಮದ್ಯ ಸಾಗಾಣಿಕೆ ಮಾಡುತ್ತಿರುವುದನ್ನು ಪತ್ತೆಹಚ್ಚಿ, ವಾಹನ ಸಾವರನನ್ನು ವಶಕ್ಕೆ ಪಡೆದುಕೊಂಡು ಮದ್ಯ ಹಾಗೂ ವಾಹನವನ್ನು ಜಪ್ತು ಮಾಡಿ ಪ್ರಕರಣ ದಾಖಲಿದೆ.

ಕುರುಗೋಡು ತಾಲ್ಲೂಕಿನ ಬಳ್ಳಾರಿ–ಸಿರುಗುಪ್ಪ ಮುಖ್ಯ ರಸ್ತೆಯ ಸೋಮಸಮುದ್ರ ಕ್ರಾಸ್ನಲ್ಲಿ ರಸ್ತೆಗಾವಲು ಸಮಯದಲ್ಲಿ ನೋಂದಣಿ ಸಂಖ್ಯೆ ಇಲ್ಲದ ಕಂದು ಬಣ್ಣದ ಟಿವಿಎಸ್ ಎಕ್ಸ್ಎಲ್ 100 ಹೆವಿಡ್ಯೂಟಿ ದ್ವಿಚಕ್ರ ವಾಹನದಲ್ಲಿ 38.160 ಲೀ ಮದ್ಯ ಹಾಗೂ 15.600 ಲೀ ಬಿಯರ್ (ಅಂದಾಜು ಮೌಲ್ಯ ರೂ.40940) ಅನ್ನು ಸಾಗಾಣಿಕೆ ಮಾಡುತ್ತಿರುವುದನ್ನು ಪತ್ತೆಹಚ್ಚಿ, ವಾಹನ ಸಾವರನನ್ನು ವಶಕ್ಕೆ ಪಡೆದುಕೊಂಡು ಮದ್ಯ, ಬಿಯರ್ ಹಾಗೂ ವಾಹನವನ್ನು ಜಪ್ತುಪಡಿಸಿ ಪ್ರಕರಣ ದಾಖಲಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

# ಲೋಕಸಭೆ ಸಾರ್ವತ್ರಿಕ ಚುನಾವಣೆ; ಬಳ್ಳಾರಿ ಜಿಲ್ಲೆ ವ್ಯಾಪ್ತಿಯಲ್ಲಿ 24 ಚೆಕ್ಪೋಸ್ಟ್ ಭದ್ರತೆ

ಬಳ್ಳಾರಿ: ಲೋಕಸಭೆ ಸಾರ್ವತ್ರಿಕ ಚುನಾವಣೆಯ ಹಿನ್ನಲೆಯಲ್ಲಿ ಚುನಾವಣೆಯ ಮಾದರಿ ನೀತಿ ಸಂಹಿತೆ ಕಟ್ಟುನಿಟ್ಟಿನ ಜಾರಿಗೆ ಜಿಲ್ಲೆಯ 5 ವಿಧಾನಸಭೆ ಕ್ಷೇತ್ರ ವ್ಯಾಪ್ತಿಯಲ್ಲಿ ಒಟ್ಟು 24 ಚೆಕ್ಪೋಸ್ಟ್ ಸ್ಥಾಪಿಸಿ, ನೇರ ದೃಶ್ಯಾವಳಿ ಸೆರೆಹಿಡಿಯಲಾಗುತ್ತದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಆಗಿರುವ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

ಮತದಾರರಿಗೆ ಆಮಿಷ ಒಡ್ಡಲು ಮತ್ತು ಅನಧಿಕೃತವಾಗಿ ವಸ್ತುಗಳನ್ನು ನೀಡುವುದು. ದಾಖಲೆಯಿಲ್ಲದ ಹಣವನ್ನು ಸಾಗಾಣೆ ಮಾಡುವುದು ಸೇರಿದಂತೆ ಆಕ್ರಮ ಚಟುವಟಿಕೆಗಳಿಗೆ ಆಸ್ಪದ ನೀಡದೇ ಮುಕ್ತ, ನ್ಯಾಯ ಸಮ್ಮತ ಮತ್ತು ಪಾರದರ್ಶಕ ಚುನಾವಣೆ ನಡೆಸಲು ಹದ್ದಿನ ಕಣ್ಣಿಡಲಾಗಿದೆ. ಇದರ ಭಾಗವಾಗಿ ಬಳ್ಳಾರಿ ಜಿಲ್ಲೆ ಅಂತರ್ರಾಜ್ಯ ಗಡಿ ಮತ್ತು ಅಂತರ್ಜಿಲ್ಲಾ ಗಡಿಯನ್ನು ಹೊಂದಿದೆ. ಈ ಹಿನ್ನಲೆಯಲ್ಲಿ ಜಿಲ್ಲಾಡಳಿತ ತೀವ್ರ ಬಿಗಿಯಾದ ಕ್ರಮವನ್ನು ಕೈಗೊಂಡಿದೆ ಅಲ್ಲದೇ, ಎಚ್ಚರಿಕೆಯನ್ನು ವಹಿಸಲಾಗಿದೆ.

ಚುನಾವಣೆ ಅಕ್ರಮಗಳ ಮೇಲೆ ಕಣ್ಗಾವಲು ಇಡಲು ಚೆಕ್ಪೋಸ್ಟ್ಗಳನ್ನು ಸ್ಥಾಪಿಸಿ, ಅಲ್ಲಿ ವಿವಿಧ ತಂಡಗಳನ್ನು ನೇಮಿಸಲಾಗಿದೆ. ಇಲ್ಲಿನ ಕಾರ್ಯಚಟುವಟಿಕೆಗಳ ನೇರ ದೃಶ್ಯಾವಳಿಗಳನ್ನು ಸೆರೆಹಿಡಿಯಲು ಸಿಸಿ ಕ್ಯಾಮೆರಾ ಆಳವಡಿಸಿ ಜಿಲ್ಲಾ ನಿಯಂತ್ರಣ ಕೊಠಡಿಯಲ್ಲಿ ವೀಕ್ಷಣೆ ಮಾಡುವುದು ಆಪ್ ಮೂಲಕವೂ ಜಿಲ್ಲಾ ಚುನಾವಣಾಧಿಕಾರಿಗಳು, ಜಿಲ್ಲಾ ರಕ್ಷಣಾಧಿಕಾರಿಗಳು, ಎಂಸಿಸಿ ತಂಡದ ಮುಖ್ಯಸ್ಥರು ವೀಕ್ಷಣೆ ಮಾಡಲಿದ್ದಾರೆ.

ಜಿಲ್ಲೆಯಲ್ಲಿ 7, ಅಂತರ್ಜಿಲ್ಲೆ ಗಡಿಯಲ್ಲಿ 4 ಮತ್ತು ಅಂತರರಾಜ್ಯ ಆಂಧ್ರಪ್ರದೇಶ ಗಡಿಭಾಗದಲ್ಲಿ 13 ಸೇರಿ 24 ಚೆಕ್ಪೋಸ್ಟ್ಗಳನ್ನು ಸ್ಥಾಪಿಸಿ ಅಧಿಕಾರಿ ಮತ್ತು ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ.

5 ಕ್ಷೇತ್ರದಲ್ಲಿ 24 ಚೆಕ್ಪೋಸ್ಟ್ ಸ್ಥಾಪನೆ:

ಜಿಲ್ಲೆಯಾದ್ಯಂತ ಒಟ್ಟು 24 ಚೆಕ್ಪೋಸ್ಟ್ ಸ್ಥಾಪಿಸಲಾಗಿದ್ದು, ಪ್ರತಿ ಚೆಕ್ಪೋಸ್ಟ್ನಲ್ಲಿ 3 ಎಸ್ಎಸ್ಟಿ ಅಧಿಕಾರಿಗಳು ಹಾಗೂ



ಪೊಲೀಸ್ ಸಿಬ್ಬಂದಿಗಳನ್ನು ನೇಮಕ ಮಾಡಲಾಗಿದೆ. ಪ್ರತಿ ಮತಕ್ಷೇತ್ರಕ್ಕೆ ಪ್ಲೈಯಿಂಗ್ ಸ್ಕ್ವಾಡ್ ಮತ್ತು ವಿಡಿಯೋ ಕಣ್ಗಾವಲು ತಂಡಗಳನ್ನು ನೇಮಕ ಮಾಡಲಾಗಿದೆ.

**ಕ್ಷೇತ್ರವಾರು ಚೆಕ್ಪೋಸ್ಟ್ ಸ್ಥಾಪನೆ:**

**91–ಕಂಪ್ಲಿ:**

ಕಂಪ್ಲಿ ಕ್ಷೇತ್ರದಲ್ಲಿ 3 ಚೆಕ್ಪೋಸ್ಟ್ಗಳನ್ನು ಸ್ಥಾಪಿಸಲಾಗಿದ್ದು, ಸಿಂಧಗೇರಿ, ಅಂತರ್ಜಿಲ್ಲೆ ಕೊಪ್ಪಳ ಗಡಿಭಾಗದಲ್ಲಿ ಕಂಪ್ಲಿ ಸೇತುವೆ ಬಳಿ ಮತ್ತು ವಿಜಯನಗರ ಜಿಲ್ಲೆ ಗಡಿಭಾಗದ ದೇವಲಾಪುರ – ಉಪ್ಪಾರಹಳ್ಳಿ ವೃತ್ತದಲ್ಲಿ ಸ್ಥಾಪನೆ ಮಾಡಲಾಗಿದೆ.

**92–ಸಿರುಗುಪ್ಪ:**

ಸಿರುಗುಪ್ಪ ಕ್ಷೇತ್ರದಲ್ಲಿ 5 ಚೆಕ್ಪೋಸ್ಟ್ಗಳನ್ನು ಆರಂಭಿಸಲಾಗಿದ್ದು, ಅಂತರ್ಜಿಲ್ಲೆ ರಾಯಚೂರು ಗಡಿಭಾಗದ ಇಬ್ರಾಹಿಂಪುರ–ಇಬ್ರಾಹಿಂಪುರ ಗ್ರಾಮ, ಅಂತರ್ರಾಜ್ಯ ಗಡಿಭಾಗದ ಇಟ್ಟಿಗೆಹಾಳ್, ವಟ್ಟುಮುರುವಾಣಿ, ಮಾಟಸೂಗೂರು ಮತ್ತು ಕೆ.ಬೆಳಗಲ್ ಗ್ರಾಮಗಳಲ್ಲಿ ಚೆಕ್ಪೋಸ್ಟ್ ಸ್ಥಾಪಿಸಲಾಗಿದೆ.

**93–ಬಳ್ಳಾರಿ ಗ್ರಾಮೀಣ ಕ್ಷೇತ್ರ:**

ಬಳ್ಳಾರಿ ಗ್ರಾಮೀಣ ವ್ಯಾಪ್ತಿಯಲ್ಲಿ ಅಂತರ್ರಾಜ್ಯ ಆಂಧ್ರಪ್ರದೇಶ ಗಡಿಭಾಗದ ಹಲಕುಂದಿ(ಬೆಂಗಳೂರು ರಸ್ತೆ), ಎತ್ತಿನ ಬೂದಿಹಾಳ್(ಬೊಮ್ಮನಹಾಳ್ ರಸ್ತೆ), ರೂಪನಗುಡಿ ರಸ್ತೆ, ಜೋಳದರಾಶಿ ಗ್ರಾಮ(ಗುಂತಕಲ್ ರಸ್ತೆ), ಕಾರೇಕಲ್ಲು ಗ್ರಾಮ, ಸಿಂಧವಾಳ ಗ್ರಾಮ ಮತ್ತು ಆಂಧ್ರ ಗಡಿಭಾಗದ ಬೊಮ್ಮನಹಾಳ್ ಗ್ರಾಮ ಒಳಗೊಂಡಂತೆ 7 ಕಡೆ ಚೆಕ್ಪೋಸ್ಟ್ಗಳನ್ನು ಸ್ಥಾಪಿಸಲಾಗಿದೆ.

**94–ಬಳ್ಳಾರಿ ನಗರ ಕ್ಷೇತ್ರ:**

ಬಳ್ಳಾರಿ ನಗರ ವ್ಯಾಪ್ತಿಯಲ್ಲಿ ಕಣೆಕಲ್ ರಸ್ತೆಯ ಆಂಧ್ರಾಳ್ ಬೈಪಾಸ್ ಹತ್ತಿರ, ಮೋಕಾ ರಸ್ತೆಯ ಕೆಇಬಿ ವೃತ್ತ ಹತ್ತಿರ, ತಾಳೂರು ರಸ್ತೆಯ ಮಹಾನಂದಿ ಕೊಟ್ಟಂ ಹತ್ತಿರ, ರೂಪನಗುಡಿ ರಸ್ತೆಯ ದುರ್ಗ ವೃತ್ತದ ಹತ್ತಿರ, ಸಿರುಗುಪ್ಪ ರಸ್ತೆಯ ಕ್ಲಾಸಿಕ್ ಫಂಕ್ಷನ್ ಹಾಲ್ ಹತ್ತಿರ, ಅನಂತಪುರ ರಸ್ತೆಯ ಬೈಪಾಸ್ ವೃತ್ತದ ಹತ್ತಿರ ಸೇರಿ 5 ಸ್ಥಾಪಿಸಲಾಗಿದೆ.

**95–ಸಂಡೂರು ಕ್ಷೇತ್ರ:**

ಸಂಡೂರು ಕ್ಷೇತ್ರ ವ್ಯಾಪ್ತಿಯಲ್ಲಿ ಜಿಂದಾಲ್ನ ವಿದ್ಯಾನಗರ ವಿಮಾನ ನಿಲ್ದಾಣ ಹತ್ತಿರ, ಅಂತರ್ಜಿಲ್ಲೆಯಾದ ಚಿತ್ರದುರ್ಗ ಗಡಿಭಾಗದ ಮೊಟಲಕುಂಟ ಹತ್ತಿರ ಮತ್ತು ಅಂತರಾಜ್ಯ ಆಂಧ್ರಪ್ರದೇಶ ಗಡಿಭಾಗದ ಜಿ.ಬಸಾಪುರ ಮತ್ತು ಎಂ.ಗಂಗಲಾಪುರ ಗ್ರಾಮಗಳಲ್ಲಿ 4 ಚೆಕ್ಪೋಸ್ಟ್ಗಳನ್ನು ಸ್ಥಾಪಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

# ಚುನಾವಣಾ ಬಾಂಡ್‌ಗಳ ಸಂಪೂರ್ಣ ಡೇಟಾ ಬಹಿರಂಗ

ನವದೆಹಲಿ: ಸುಪ್ರೀಂ ಕೋರ್ಟ್‌ನ ಕಟ್ಟುನಿಟ್ಟಿನ ಸೂಚನೆ ನಂತರ, ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಚುನಾವಣಾ ಬಾಂಡ್‌ಗಳ ಸಂಪೂರ್ಣ ಡೇಟಾವನ್ನು ಚುನಾವಣಾ ಆಯೋಗಕ್ಕೆ ಹಸ್ತಾಂತರಿಸಿದ್ದು ಈ ಡೇಟಾವನ್ನು ಚುನಾವಣಾ ಆಯೋಗವೂ ತನ್ನ ಅಧಿಕೃತ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಿದೆ.

ಇದಕ್ಕೂ ಮೊದಲು ಎಸ್‌ಬಿಐ ಅಪೂರ್ಣ ಡೇಟಾವನ್ನು ಒದಗಿಸಿತ್ತು. ಇದರಲ್ಲಿ ಬಾಂಡ್‌ನ ಖರೀದಿದಾರ ಮತ್ತು ರಿಡೀಮರ್ ಬಗ್ಗೆ ಮಾತ್ರ ಮಾಹಿತಿ ಲಭ್ಯವಿತ್ತು. ಈ ಬಗ್ಗೆ ಸುಪ್ರೀಂ ಕೋರ್ಟ್ ಕಟ್ಟುನಿಟ್ಟಿನ ಸೂಚನೆ ನೀಡಿದ್ದು, ಬ್ಯಾಂಕ್ ಸಂಪೂರ್ಣ ಮಾಹಿತಿ ನೀಡಬೇಕು ಎಂದು ಹೇಳಿತ್ತು. ಯಾರು ಯಾವ ಪಕ್ಷಕ್ಕೆ ಬಾಂಡ್‌ಗಳ ಮೂಲಕ ಎಷ್ಟು ದೇಣಿಗೆ ನೀಡಿದ್ದಾರೆ ಎಂಬುದನ್ನು ತಿಳಿದುಕೊಳ್ಳಲು ಆ ಮಾಹಿತಿಯನ್ನು ಸಾರ್ವಜನಿಕಗೊಳಿಸುವಂತೆ ನ್ಯಾಯಾಲಯವು ಬ್ಯಾಂಕ್‌ಗೆ ಸೂಚಿಸಿತ್ತು. ಈಗ ಈ ಮಾಹಿತಿ ಚುನಾವಣಾ ಆಯೋಗದ ವೆಬ್‌ಸೈಟ್‌ನಲ್ಲಿಯೂ ಸಾರ್ವಜನಿಕವಾಗಿದೆ. ಅಂದರೆ ಯಾವ ವ್ಯಕ್ತಿ ಅಥವಾ ಕಂಪನಿಯಿಂದ ಯಾವ ಪಕ್ಷಕ್ಕೆ ಎಷ್ಟು ಹಣ ದೇಣಿಗೆಯಾಗಿದೆ ಎಂಬುದನ್ನು ಈಗ ಯಾರಾದರೂ ನೋಡಬಹುದು. ಇದಕ್ಕಾಗಿ, ಬಾಂಡ್‌ನ ವಿಶಿಷ್ಟ ಕೋಡ್ ಅನ್ನು ಹುಡುಕುವ ಮೂಲಕ, ಆ ಬಾಂಡ್ ಅನ್ನು ಯಾವ ಪಕ್ಷದವರು ಎನ್‌ಕ್ಯಾಶ್ ಮಾಡಿದ್ದಾರೆ ಎಂಬುದನ್ನು ಕಂಡುಹಿಡಿಯಬಹುದು.

ಎಸ್‌ಬಿಐ ಅಧ್ಯಕ್ಷ ದಿನೇಶ್ ಕುಮಾರ್ ಖಾರಾ ಅವರು ಸುಪ್ರೀಂ ಕೋರ್ಟ್‌ಗೆ ಅಫಿಡವಿಟ್ ಸಲ್ಲಿಸಿದ್ದು, ನ್ಯಾಯಾಲಯದ ಆದೇಶದಂತೆ ನಾವು ಚುನಾವಣಾ ಬಾಂಡ್‌ಗಳಿಗೆ ಸಂಬಂಧಿಸಿದ ಎಲ್ಲಾ ಮಾಹಿತಿಯನ್ನು ಗಡುವಿನ ಮೊದಲು ಅಂದರೆ ಮಾರ್ಚ್ 21 ರ ಸಂಜೆ 5 ಗಂಟೆಗೆ ನೀಡಿದ್ದೇವೆ ಎಂದು ಹೇಳಿದ್ದಾರೆ. ಈ ಮಾಹಿತಿಯು ಬಾಂಡ್‌ನ ಆಲ್ಫಾ ಸಂಖ್ಯಾತ್ಮಕ ಸಂಖ್ಯೆಯನ್ನು ಒಳಗೊಂಡಿರುತ್ತದೆ. ಅಂದರೆ ವಿಶಿಷ್ಟ ಸಂಖ್ಯೆ,



ಬಾಂಡ್‌ನ ಬೆಲೆ, ಖರೀದಿದಾರರ ಹೆಸರು, ಪಾವತಿಯನ್ನು ಸ್ವೀಕರಿಸುವ ಪಕ್ಷದ ಹೆಸರು, ಪಕ್ಷದ ಬ್ಯಾಂಕ್ ಖಾತೆ ಸಂಖ್ಯೆಯ ಕೊನೆಯ ನಾಲ್ಕು ಅಂಕಿಗಳು, ರಿಡೀಮ್ ಮಾಡಿದ ಬಾಂಡ್‌ನ ಮೌಲ್ಯ/ಸಂಖ್ಯೆ. ಸೈಬರ್ ಭದ್ರತೆಯ ದೃಷ್ಟಿಯಿಂದ, ರಾಜಕೀಯ ಪಕ್ಷದ ಸಂಪೂರ್ಣ ಬ್ಯಾಂಕ್ ಖಾತೆ ಸಂಖ್ಯೆ, ಪಕ್ಷ ಮತ್ತು ಬಾಂಡ್ ಖರೀದಿದಾರರ ಏಜಅ ವಿವರಗಳನ್ನು ಸಾರ್ವಜನಿಕಗೊಳಿಸಲಾಗಿಲ್ಲ.

ಚುನಾವಣಾ ಬಾಂಡ್‌ಗಳ ಕುರಿತು ಸುಪ್ರೀಂ ಕೋರ್ಟ್ ತೀರ್ಪಿನ ಒಂದು ತಿಂಗಳ ನಂತರವೂ, ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ತನ್ನ ಡೇಟಾವನ್ನು ಸರಿಯಾಗಿ ಬಿಡುಗಡೆ ಮಾಡಲು ಸಾಧ್ಯವಾಗಲಿಲ್ಲ. ನ್ಯಾಯಾಲಯ ಮತ್ತೆ ಎಸ್‌ಬಿಐಗೆ ಛೀಮಾರಿ ಹಾಕಬೇಕಾಯಿತು. ನ್ಯಾಯಾಲಯದ ತೀರ್ಪನ್ನು ಬ್ಯಾಂಕ್ ಅರ್ಥ ಮಾಡಿಕೊಳ್ಳುತ್ತಿಲ್ಲವೇ ಎಂದು ಮುಖ್ಯ ನ್ಯಾಯಮೂರ್ತಿ ಡಿವೈ ಚಂದ್ರಚೂಡ್ ಕೇಳಿದ್ದರು. ಸೋಮವಾರದ ವಿಚಾರಣೆಯಲ್ಲಿ ಮುಖ್ಯ ನ್ಯಾಯಮೂರ್ತಿ ಚಂದ್ರಚೂಡ್ ಅವರು ಮಾರ್ಚ್ 21ರ ಸಂಜೆ 5 ಗಂಟೆಯ ಮೊದಲು ಬಾಂಡ್‌ಗಳಿಗೆ ಸಂಬಂಧಿಸಿದ ಎಲ್ಲಾ ಡೇಟಾವನ್ನು ಬಿಡುಗಡೆ ಮಾಡುವಂತೆ ಎಸ್‌ಬಿಐಗೆ ಆದೇಶಿಸುವಂತೆ ಬ್ಯಾಂಕ್‌ಗಳು ಮತ್ತು ಕಂಪನಿಗಳ ಪರವಾಗಿ ಹಾಜರಾಗುವ ವಕೀಲರಿಗೆ ಸೂಚಿಸಿದರು. ನಿರ್ಧಾರದ ಪ್ರಕಾರ, ಬ್ಯಾಂಕ್ ಬಾಂಡ್‌ಗಳ ಡೇಟಾವನ್ನು ಚುನಾವಣಾ ಆಯೋಗಕ್ಕೆ ಹಸ್ತಾಂತರಿಸಬೇಕಾಗಿತ್ತು. ಅದನ್ನು ಆಯೋಗದ ಸೈಟ್‌ನಲ್ಲಿ ಪ್ರಕಟಿಸಲಾಗುವುದು, ಇದರಿಂದ ಸಾಮಾನ್ಯ ಜನರು ಸಹ ಅದನ್ನು ನೋಡಬಹುದು.

ಸಾಮಾನ್ಯ ಮತದಾರರು ಸುಲಭವಾಗಿ ಡೇಟಾವನ್ನು ಅರ್ಥಮಾಡಿಕೊಳ್ಳಲು, ಸುಪ್ರೀಂ ಕೋರ್ಟ್ ಸ್ಟೇಟ್ ಬ್ಯಾಂಕ್ ಎಲ್ಲಾ ಡೇಟಾವನ್ನು ವಿಶಿಷ್ಟ ಕೋಡ್‌ನೊಂದಿಗೆ ಬಿಡುಗಡೆ ಮಾಡಬೇಕೆಂದು ಬಯಸಿತು. ಉದಾಹರಣೆಗೆ, ಬ್ಯಾಂಕ್ ಅನನ್ಯ ಕೋಡ್‌ನೊಂದಿಗೆ ಡೇಟಾವನ್ನು ಬಿಡುಗಡೆ ಮಾಡಿದರೆ, ಬ್ಯಾಂಕ್ ಡೇಟಾವನ್ನು ಎರಡು ಭಾಗಗಳಲ್ಲಿ ಬಿಡುಗಡೆ ಮಾಡಬೇಕು.

ಭಾಗ–1 ರಲ್ಲಿ, ಚುನಾವಣಾ ಬಾಂಡ್‌ಗಳನ್ನು ಖರೀದಿಸಿದ ದಿನಾಂಕ, ಖರೀದಿದಾರರ ಹೆಸರುಗಳು, ಬಾಂಡ್‌ಗಳ ವಿಶಿಷ್ಟ ಕೋಡ್ ಮತ್ತು ಅದರ ಮುಖಬೆಲೆ ಅಂದರೆ ಅದರ ಬೆಲೆಯನ್ನು ನೀಡಬೇಕು.

ಭಾಗ–2 ರಲ್ಲಿ, ಚುನಾವಣಾ ಬಾಂಡ್‌ಗಳ ವಿಮೋಚನೆಯ ದಿನಾಂಕ, ರಿಡೀಮ್ ಮಾಡುವ ಪಕ್ಷ, ಬಾಂಡ್‌ಗಳ ವಿಶಿಷ್ಟ ಕೋಡ್ ಮತ್ತು ಬಾಂಡ್‌ನ ಮುಖಬೆಲೆಯನ್ನು ಅಂದರೆ ಅದರ ಬೆಲೆಯನ್ನು ನೀಡಬೇಕು.

**ಆಲ್ಫಾನ್ಯೂಮರಿಕ್ ಕೋಡ್ ಎಂದರೇನು?**

ಎಲೆಕ್ಟೋರಲ್ ಬಾಂಡ್ ಮೊದಲಿನಿಂದಲೂ ವಿವಾದದಲ್ಲಿದೆ. ಅದರ ಪಾರದರ್ಶಕತೆಯ ಬಗ್ಗೆ ಪ್ರಶ್ನೆಗಳು ಎದ್ದ ನಂತರ, ಹಣಕಾಸು ಸಚಿವಾಲಯವು ಡಿಸೆಂಬರ್ 2021ರಲ್ಲಿ ಲೋಕಸಭೆಯಲ್ಲಿ ಒಪ್ಪಿಕೊಂಡಿತು. ಚುನಾವಣಾ ಬಾಂಡ್‌ನಲ್ಲಿರುವ ಗುಪ್ತ ಆಲ್ಫಾನ್ಯೂಮರಿಕ್ ಸಂಖ್ಯೆಯು ಯಾವುದೇ ನಕಲಿ ಚುನಾವಣಾ ಬಾಂಡ್‌ನ ಮುದ್ರಣ ಅಥವಾ ಎನ್‌ಕ್ಯಾಶ್‌ಮೆಂಟ್ ಅನ್ನು ತಡೆಯಲು ಆಂತರಿಕ ಭದ್ರತೆಯನ್ನು ಒದಗಿಸುತ್ತದೆ ಎಂದು ಹೇಳಿತ್ತು.

## ಬೆಳಗಾವಿ ಸಬ್ ರಿಜಿಸ್ಟರ್ ಕಚೇರಿಯಲ್ಲಿ ಆಕಸ್ಮಿಕ ಬೆಂಕಿ ಅವಘಡ



ಬೆಳಗಾವಿ: ಬೆಳಗಾವಿ ಉತ್ತರ ಮತ ಕ್ಷೇತ್ರದಲ್ಲಿರುವ ಸಬ್ ರಿಜಿಸ್ಟರ್ ಕಚೇರಿಗೆ ಇಂದು ಮಧ್ಯಾಹ ಶಾರ್ಟ್ ಸರ್ಕ್ಯೂಟ್ ಅಗ್ನಿಅವಘಡ ಸಂಭವಿಸಿದ್ದು, ಅದೃಷ್ಟವಶಾತ್ ಯಾವುದೇ ಹಾನಿಯಾಗಿಲ್ಲ.

ಬೆಳಗಾವಿ ಉತ್ತರದ ಕ್ಷೇತ್ರದ ಸಬ್ ರಿಜಿಸ್ಟ್ರಾರ್ ಕಚೇರಿಯಲ್ಲಿ ಮಧ್ಯಾಹ ಹೊತ್ತಿಗೆ ಫ್ಯಾನ್ ಹತ್ತಿರ ಶಾರ್ಟ್ ಸರ್ಕ್ಯೂಟ್ ಉಂಟಾಗಿ ಓಮ್ಮಲೆ ಬೆಂಕಿ ಕಾಣಿಸಿಕೊಂದಿದೆ. ಇದರಿಂದ ಗಾಬರಿಯಾದ ಎಲ್ಲ ಸಿಬ್ಬಂದಿಗಳು ತಕ್ಷಣ ಕಚೇರಿಯಿಂದ ಹೊರ ಬಂದಿದ್ದಾರೆ. ಆದರೆ ಈ ಘಟನೆಯಲ್ಲಿ ಸಿಬ್ಬಂದಿ ಸೇರಿದಂತೆ ಯಾವುದೇ ಪೀಠೋಪಕರಣ ಗಳಿಗೂ ಹಾನಿಯಾಗಿಲ್ಲ ಎಂದು ತಿಳಿದುಬಂದಿದೆ.

## ಲೋಕಸಭೆ ಸಾರ್ವತ್ರಿಕ ಚುನಾವಣೆ; ಕಂಟ್ರೋಲ್ ರೂಂ ಆರಂಭ

ಬಳ್ಳಾರಿ: ಲೋಕಸಭೆ ಸಾರ್ವತ್ರಿಕ ಚುನಾವಣೆ 2024ರ ಅಂಗವಾಗಿ ಜಿಲ್ಲೆಯಾದ್ಯಂತ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುತ್ತದೆ. ಈ ನಿಟ್ಟಿನಲ್ಲಿ ಜಿಲ್ಲೆಯಲ್ಲಿ ಸುಗಮ ಹಾಗೂ ಪಾರದರ್ಶಕ ಚುನಾವಣೆಯನ್ನು ನಡೆಸುವ ಸಂಬಂಧ ಸಾರ್ವಜನಿಕರ ದೂರು–ದುಮ್ಮಾನಗಳನ್ನು ಆಲಿಸಲು ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಕಂಟ್ರೋಲ್ ರೂಂ ಸ್ಥಾಪಿಸಲಾಗಿದೆ.

ಚುನಾವಣೆಗೆ ಸಂಬಂಧಿಸಿದ ಯಾವುದೇ ದೂರುಗಳು, ಮಾಹಿತಿ ಹಾಗೂ ಇತರೆ ಸಾರ್ವಜನಿಕ ಕುಂದುಕೊರತೆಗಳು ಇದ್ದಲ್ಲಿ ಟೋಲ್ ಫ್ರೀ ಸಂಖ್ಯೆ 08392–277100 ಮತ್ತು 1950 ಕರೆ ಮಾಡಿ ತಿಳಿಸಿಬಹುದು




ಎಂದು ಜಿಲ್ಲಾ ಚುನಾವಣಾಧಿಕಾರಿ ಆಗಿರುವ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

## ಸಿಎಂ, ಡಿಸಿಎಂ ಭೇಟಿಯಾಗಿ ಆಶೀರ್ವಾದ ಪಡೆದ ಮೃಣಾಲ ಹೆಬ್ಬಾಳಕರ್





ಬೆಳಗಾವಿ: ಬೆಳಗಾವಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿರುವ ಮೃಣಾಲ ಹೆಬ್ಬಾಳಕರ್ ಗುರುವಾರ ಬೆಂಗಳೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಅವರನ್ನು ಭೇಟಿಯಾಗಿ ಆಶೀರ್ವಾದ ಪಡೆದರು.

ಮೇ 7ರಂದು ನಡೆಯಲಿರುವ ಲೋಕಸಭಾ ಚುನಾವಣೆಗೆ ಮೃಣಾಲ ಹೆಬ್ಬಾಳಕರ್ ಬೆಳಗಾವಿ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿದ್ದಾರೆ. ತಮಗೆ ಟಿಕೆಟ್ ನೀಡಿರುವುದಕ್ಕೆ ಮುಖ್ಯಮಂತ್ರಿ ಮತ್ತು ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಡಿ.ಕೆ.ಶಿವಕುಮಾರ ಅವರನ್ನು ಭೇಟಿಯಾಗಿ ಧನ್ಯವಾದ ಸಲ್ಲಿಸಿದ ಮೃಣಾಲ ಹೆಬ್ಬಾಳಕರ್, ಇಬ್ಬರ ಆಶೀರ್ವಾದ ಪಡೆದರು. ಸಿದ್ದರಾಮಯ್ಯ ಮತ್ತು ಡಿ.ಕೆ.ಶಿವಕುಮಾರ ಇಬ್ಬರೂ ಮೃಣಾಲ ಹೆಬ್ಬಾಳಕರ್ ಅವರನ್ನು ಆಶೀರ್ವದಿಸಿ, ಶುಭ ಕೋರಿದರು.

# ಜೀವ–ಜಲ ಸಂರಕ್ಷಿಸೋಣ, ಜೀವ ವೈವಿಧ್ಯ ಉಳಿಸೋಣ




ವಿಶ್ವ ಜಲ ದಿನವು ಮಾರ್ಚ್ 22 ರಂದು ನಡೆಯುವ ವಾರ್ಷಿಕ ವಿಶ್ವಸಂಸ್ಥೆಯ ಆಚರಣೆಯ ದಿನವಾಗಿದ್ದು, ಇದು ಶುದ್ಧ ನೀರಿನ ಮಹತ್ವವನ್ನು ಎತ್ತಿ ತೋರಿಸುತ್ತದೆ, ಸಿಹಿನೀರಿನ ಸಂಪನ್ಮೂಲಗಳ ಸುಸ್ಥಿರ ನಿರ್ವಹಣೆಗಾಗಿ ಪ್ರತಿಪಾದಿಸಲು ಈ ದಿನವನ್ನು ಬಳಸಲಾಗುತ್ತದೆ. ಪ್ರತಿ ವರ್ಷದ ಥೀಮ್ ಶುದ್ಧ ನೀರು , ನೈರ್ಮಲ್ಯ ಮತ್ತು ನೈರ್ಮಲ್ಯಗೆ ಸಂಬಂಧಿಸಿದ ವಿಷಯಗಳ ಮೇಲೆ ಕೇಂದ್ರೀಕರಿಸುತ್ತದೆ, ಇದು ಸುಸ್ಥಿರ ಅಭಿವೃದ್ಧಿ ಗುರಿಗಳಿಗೆ ಅನುಗುಣವಾಗಿದೆ. ವಿಶ್ವಸಂಸ್ಥೆ ವರ್ಲ್ಡ್ ವಾಟರ್ ಡೆವಲಪ್‌ಮೆಂಟ್ ರಿಪೋರ್ಟ್ (ಘಘಆಖ) ಅನ್ನು ಪ್ರತಿ ವರ್ಷ ವಿಶ್ವ ಜಲ ದಿನದಂದು ಬಿಡುಗಡೆ ಮಾಡಲಾಗುತ್ತದೆ.

**ಇತಿಹಾಸ:–** ರಿಯೊ ಡಿ ಜನ್ನೈರೊದಲ್ಲಿ 1992 ರ ವಿಶ್ವಸಂಸ್ಥೆಯ ಪರಿಸರ ಮತ್ತು ಅಭಿವೃದ್ಧಿ ಸಮ್ಮೇಳನದ ಕಾರ್ಯಸೂಚಿಯಲ್ಲಿ ಈ ದಿನವನ್ನು ಮೊದಲು ಔಪಚಾರಿಕವಾಗಿ ಪ್ರಸ್ತಾಪಿಸಲಾಯಿತು. ಡಿಸೆಂಬರ್ 1992 ರಲ್ಲಿ ಯುನೈಟೆಡ್ ನೇಷನ್ಸ್ ಜನರಲ್ ಅಸೆಂಬ್ಲಿ ೦/ಖಇಖ/47/193 ನಿರ್ಣಯವನ್ನು ಅಂಗೀಕರಿಸಿತು, ಅದರ ಮೂಲಕ ಪ್ರತಿ ವರ್ಷದ 22 ಮಾರ್ಚ್ ಅನ್ನು ವಿಶ್ವ ನೀರಿನ ದಿನವೆಂದು ಘೋಷಿಸಲಾಯಿತು. 1993 ರಲ್ಲಿ ಮೊದಲ ವಿಶ್ವ ಜಲ ದಿನವನ್ನು ಆಚರಿಸಲಾಯಿತು.

**ಉದ್ದೇಶಗಳು:–** ವಿಶ್ವ ಜಲ ದಿನವು ಅಂತರರಾಷ್ಟ್ರೀಯ ಆಚರಣೆ ದಿನವಾಗಿದೆ . ನೀರಿನ ಸಂಬಂಧಿತ ಸಮಸ್ಯೆಗಳ ಬಗ್ಗೆ ಇನ್ನಷ್ಟು ತಿಳಿದುಕೊಳ್ಳಲು ಮತ್ತು ಬದಲಾವಣೆಯನ್ನು ಮಾಡಲು ಕ್ರಮ ತೆಗೆದುಕೊಳ್ಳಲು ಪ್ರಪಂಚದಾದ್ಯಂತದ ಜನರನ್ನು ಪ್ರೇರೇಪಿಸುವುದು ಇದರ ಉದ್ದೇಶವಾಗಿದೆ. 2020 ರಲ್ಲಿ ಅಔಗಿಖಆ–19 ಸಾಂಕ್ರಾಮಿಕ ರೋಗದಿಂದಾಗಿ, ಕೈ ತೊಳೆಯುವುದು ಮತ್ತು ನೈರ್ಮಲ್ಯದ ಮೇಲೆ ಹೆಚ್ಚುವರಿ ಗಮನವನ್ನು ನೀಡಲಾಯಿತು. ಸಂಬಂಧಿತ ಸಮಸ್ಯೆಗಳು ನೀರಿನ ಕೊರತೆ, ಜಲ ಮಾಲಿನ್ಯ, ಅಸಮರ್ಪಕ ನೀರು ಸರಬರಾಜು, ನೈರ್ಮಲ್ಯದ ಕೊರತೆ ಮತ್ತು ಹವಾಮಾನ ಬದಲಾವಣೆಯ ಪರಿಣಾಮಗಳು ತಡೆದಾಗ ಮಾತ್ರ ನೀರಿನ ಸಂರಕ್ಷಣೆ ಸಾಧ್ಯ.

**ವರ್ಷಕ್ಕೊಂದು ಥೀಮ್:–** ವಿಶ್ವಸಂಸ್ಥೆಯು ವಾಟರ್ ವಿಶ್ವ ಜಲ ದಿನದ ಸಂಚಾಲಕವಾಗಿದೆ ಮತ್ತು ಆ ವರ್ಷದ ಗಮನದಲ್ಲಿ ಆಸಕ್ತಿಯನ್ನು ಹಂಚಿಕೊಳ್ಳುವ ವಿವಿಧ ಸಂಸ್ಥೆಗಳೊಂದಿಗೆ ಸಮಾಲೋಚಿಸಿ ಪ್ರತಿ ವರ್ಷ ಥೀಮ್ ಅನ್ನು ಆಯ್ಕೆ ಮಾಡುತ್ತದೆ. 2021 ರ ಥೀಮ್ "ನೀರನ್ನು ಮೌಲ್ಯೀಕರಿಸುವುದು" ಆಗಿತ್ತು, ಅದೇ ರೀತಿ 2022 ರ ಥೀಮ್ "ಅಂತರ್ಜಲ ಮತ್ತು ಅದೃಶ್ಯವನ್ನು ಗೋಚರಿಸುವಂತೆ ಮಾಡುವುದು" ಹಾಗೂ 2023 ರ ಥೀಮ್ "ಬದಲಾವಣೆ ವೇಗಗೊಳಿಸುವುದು" ಎಂಬುದಾಗಿತ್ತು. ಸದ್ಯ ಪ್ರಸಕ್ತ 2024 ನೇ ವರ್ಷದ ಥೀಮ್ "ಶಾಂತಿಗಾಗಿ ನೀರು" ಎಂಬುದಾಗಿದೆ.

**2024 ರಲ್ಲಿ "ಶಾಂತಿಗಾಗಿ ನೀರು":–** ನೀರು ಶಾಂತಿಯನ್ನು ಸೃಷ್ಟಿಸಬಹುದು ಹಾಗೂ ಸಂಘರ್ಷಕ್ಕೂ ಕಾರಣವಾಗಬಹುದು. ನೀರಿನ ಕೊರತೆಯಿರುವಾಗ ಅಥವಾ ಕಲುಷಿತಗೊಂಡಾಗ ಅಥವಾ ಜನರು ಅಸಮಾನತೆಯನ್ನು ಹೊಂದಿರುವಾಗ ಅಥವಾ ಪ್ರವೇಶವಿಲ್ಲದಿದ್ದಾಗ, ಸಮುದಾಯಗಳು ಮತ್ತು ದೇಶಗಳ ನಡುವೆ ಉದ್ವಿಗ್ನತೆ ಉಂಟಾಗಬಹುದು. ಪ್ರಪಂಚದಾದ್ಯಂತ 3 ಶತಕೋಟಿಗೂ ಹೆಚ್ಚು ಜನರು ರಾಷ್ಟ್ರೀಯ ಗಡಿಗಳನ್ನು ದಾಟುವ ನೀರನ್ನು ಅವಲಂಬಿಸಿದ್ದಾರೆ. ಆದರೂ ಕೇವಲ 24 ದೇಶಗಳು ತಮ್ಮ ಎಲ್ಲಾ ಹಂಚಿಕೆಯ ನೀರಿನ ಸಹಕಾರ ಒಪ್ಪಂದಗಳನ್ನು ಹೊಂದಿವೆ. ಹವಾಮಾನ ಬದಲಾವಣೆಯ ಪರಿಣಾಮಗಳು ಹೆಚ್ಚಾದಂತೆ ಮತ್ತು ಜನಸಂಖ್ಯೆಯು ಬೆಳೆದಂತೆ, ನಮ್ಮ ಅತ್ಯಮೂಲ್ಯ ಸಂಪನ್ಮೂಲವನ್ನು ರಕ್ಷಿಸುವ ಮತ್ತು ಸಂರಕ್ಷಿಸುವ ಸುತ್ತ ಒಗ್ಗೂಡಿಸುವ ತುರ್ತು ಅವಶ್ಯಕತೆಯಿದೆ. ಸಾರ್ವಜನಿಕ ಆರೋಗ್ಯ ಮತ್ತು ಸಮೃದ್ಧಿ, ಆಹಾರ ಮತ್ತು ಶಕ್ತಿ ವ್ಯವಸ್ಥೆಗಳು, ಆರ್ಥಿಕ ಉತ್ಪಾದಕತೆ ಮತ್ತು ಪರಿಸರ ಸಮಗ್ರತೆ ಎಲ್ಲವೂ ಉತ್ತಮವಾಗಿ ಕಾರ್ಯನಿರ್ವಹಿಸುವ ಮತ್ತು ಸಮಾನವಾಗಿ ನಿರ್ವಹಿಸಲಾದ ನೀರಿನ ಚಕ್ರವನ್ನು ಅವಲಂಬಿಸಿವೆ. ಅದಕ್ಕಾಗಿ ನೀರನ್ನು ಸಂರಕ್ಷಿಸುವುದು ನಮ್ಮೆಲ್ಲರ ಹೊಣೆಯಾಗಿದೆ.

**ಜಲ ಸಂರಕ್ಷಣೆಗಾಗಿ ಕಾರ್ಯಕ್ರಮಗಳು:–** ವಿಶ್ವ ಜಲ ದಿನವನ್ನು ಪ್ರಪಂಚದಾದ್ಯಂತ ವಿವಿಧ ಕಾರ್ಯಕ್ರಮಗಳೊಂದಿಗೆ ಆಚರಿಸಲಾಗುತ್ತದೆ. ಇವುಗಳು ನಾಟಕೀಯ, ಸಂಗೀತ ಅಥವಾ ಲಾಬಿಯ ಸ್ವಭಾವವಾಗಿರಬಹುದು. ಸರ್ಕಾರೇತರ ಸಂಸ್ಥೆಗಳಾದ ಗಒಖಅಇಈ ನಗರದ ಬಡವರಿಗೆ ನೀರು ಮತ್ತು ನೈರ್ಮಲ್ಯದ ಬಗ್ಗೆ ಸಾರ್ವಜನಿಕ ಜಾಗೃತಿ ಮೂಡಿಸಲು, ನೀರಿನ ಸಮಸ್ಯೆಗಳಿಗೆ ಮಾಧ್ಯಮದ ಗಮನ ಸೆಳೆಯಲು ಮತ್ತು ಕ್ರಿಯೆಯನ್ನು ಪ್ರೇರೇಪಿಸಲು ಈ ದಿನವನ್ನು ಬಳಸುತ್ತದೆ. ಹಲವಾರು ಕಾರ್ಯಕ್ರಮಗಳು, ಪ್ರಕಟಣೆಗಳು ಮತ್ತು ಚಲನಚಿತ್ರಗಳನ್ನು ಬಿಡುಗಡೆ ಮಾಡುವುದರ ಜೊತೆಗೆ ಸೆಮಿನಾರ್‌ಗಳು ಮತ್ತು ಪ್ರದರ್ಶನಗಳನ್ನು ಆಯೋಜಿಸುವುದನ್ನು ಒಳಗೊಂಡಿವೆ.

**ನಾವು ನೀರನ್ನು ಏಕೆ ರಕ್ಷಿಸಬೇಕು:–**

1) ಜೀವ ವೈವಿಧ್ಯದ ಉಳಿವಿಗೆ ನೀರು ಬೇಕಾಗಿದೆ, ಅದಕ್ಕಾಗಿ ನೀರನ್ನು ಸಂರಕ್ಷಿಸಿ, ಕಾಡು–ನಾಡು ಉಳಿಸಿ.

2) ನೀರಿನಿಂದಲೇ ಮನುಷ್ಯ ಮತ್ತು ಪ್ರಾಣಿಗಳು ಬದುಕಿರುವುದರಿಂದ, ಅದಕ್ಕಾದರೂ ನೀರಿನ ರಕ್ಷಣೆ ನಮ್ಮ ಕರ್ತವ್ಯವಾಗಲಿ.

3) ಹೆಚ್ಚಾಗುತ್ತಿರುವ ಜನಸಂಖ್ಯೆಯಿಂದ ಅರಣ್ಯ ನಾಶವಾಗುತ್ತದೆ, ಇದರಿಂದ ಅಂತರ್ಜಲ ಪ್ರಮಾಣ ಕಡಿಮೆಯಾಗಿದೆ. ಆದ್ದರಿಂದ ಅರಣ್ಯ ಸಂರಕ್ಷಣೆ ಮಾಡಬೇಕಾದ ಪರಿಸ್ಥಿತಿಯಲ್ಲಿಯೂ ನಾವಿದ್ದೇವೆ.

4) ಜೀವ ವೈವಿಧ್ಯದ ಉಳಿವಿಗೆ, ಕಾಡು ಬೆಳೆಸೋಣ, ನಾಡು ಉಳಿಸೋಣ, ನೀರನ್ನು ಸಂರಕ್ಷಿಸೋಣ.

5) ನೀರು ಎಂಬುದು ಕೇವಲ ಬಳಸಬೇಕಾದ ಮತ್ತು ಸ್ಪರ್ಧಿಸುವ ಸಂಪನ್ಮೂಲವಲ್ಲ – ಇದು ಮಾನವ ಹಕ್ಕು, ಜೀವನದ ಪ್ರತಿಯೊಂದು ಅಂಶಕ್ಕೂ ಸ್ವಾಭಾವಿಕವಾಗಿದೆ ಎಂಬುದನ್ನು ನಾವು ಅರಿತುಕೊಳ್ಳಬೇಕು.

6) ಅಂತರ್‌ರಾಷ್ಟ್ರೀಯ ಮಟ್ಟದಲ್ಲಿ ವಿಶ್ವಸಂಸ್ಥೆಯ ಸಮಾವೇಶಗಳಿಂದ ಹಿಡಿದು ಸ್ಥಳೀಯ ಮಟ್ಟದಲ್ಲಿ ಕ್ರಮಗಳವರೆಗೆ – ನ್ಯಾಯಯುತ ಮತ್ತು ಸಮರ್ಥನೀಯ ನೀರಿನ ಬಳಕೆಯ ಸುತ್ತಲೂ ಒಂದಾಗುವ ಮೂಲಕ ನಾವು ಸಮುದಾಯಗಳು ಮತ್ತು ದೇಶಗಳ ನಡುವೆ ಸಾಮರಸ್ಯವನ್ನು ಬೆಳೆಸಬಹುದು.

**ಕೊನೆಯ ಮಾತು:–** ಮಾರ್ಚ 22 ಕ್ಕೆ ಮಾತ್ರ "ವಿಶ್ವ ಜಲ ದಿನ" ಸೀಮಿತವಾಗದೆ ನೀರಿನ ಸಂರಕ್ಷಣೆಯು ಪ್ರತಿಯೊಬ್ಬರ ಕರ್ತವ್ಯವಾಗಿರಬೇಕು. ನೀರು ಇರದೇ ನಮ್ಮೆಲ್ಲರ ಜೀವನವನ್ನು ಕಲ್ಪಿಸಿಕೊಳ್ಳುವುದು ಕಷ್ಟಕರವಾದ ಸಂಗತಿಯಾಗಿದೆ. ಜಲ ಸಂಪತ್ತು ಚೆನ್ನಾಗಿದ್ದರೆ ನಾವೆಲ್ಲರೂ ಖುಷಿಯಿಂದ ಬದುಕಲು ಸಾಧ್ಯವಾಗುತ್ತದೆ. ಭೂಮಿ ಮತ್ತು ಪರಿಸರ ಸಮತೋಲನವಾಗಿರಬೇಕಾದರೆ ನೀರಿನ ಪಾತ್ರ ಬಹುಮುಖ್ಯ. ಈ ಕಾರಣಕ್ಕೆ ಜಲ ಸಂರಕ್ಷಣೆಗೆ ಪಣತೊಡಬೇಕು ಎಂಬ ಆಶಯ ಈ ದಿನದಾಗಲಿ. ಮುಂಬರುವ ಪೀಳಿಗೆಗೂ ಸಮತೋಲಿತ ಜೀವ ಜಲವನ್ನು ಒದಗಿಸಬೇಕಾದುದ್ದು ನಮ್ಮೆಲ್ಲರ ಕರ್ತವ್ಯ. ಈ ನಿಟ್ಟಿನಲ್ಲಿ ಜೀವ ವೈವಿಧ್ಯದ ಉಳಿವಿಗೆ ಜಲ ಸಂರಕ್ಷಿಸಿ, ಕಾಡು–ನಾಡು ಉಳಿಸಲು ಕಾರ್ಯಪ್ರವೃತ್ತರಾಗೋಣ.

**–ಎನ್.ಎನ್.ಕಬ್ಬೂರ**
**ಶಿಕ್ಷಕರು ತಾ–ಸವದತ್ತಿ**
**ಜಿ–ಬೆಳಗಾವಿ**

# ಬಿಜೆಪಿ ಟಿಕೆಟ್ ಯಾರಿಗೆ ನೀಡಿದ್ರೂ ಅವರ ಗೆಲುವಿಗೆ ಶ್ರಮಿಸುತ್ತೇವೆ: ಶಾಸಕ ಬಾಲಚಂದ್ರ ಜಾರಕಿಹೊಳಿ

ಮೂಡಲಗಿ: ಬೆಳಗಾವಿ ಲೋಕಸಭಾ ಕ್ಷೇತ್ರದ ಅಭ್ಯರ್ಥಿಯ ಆಯ್ಕೆಯು ಇನ್ನೆರಡು ದಿನಗಳಲ್ಲಿ ಅಂತಿಮವಾಗಲಿದ್ದು, ಪಕ್ಷದ ಹೈಕಮಾಂಡ್ ಯಾರಿಗೆ ಟಿಕೇಟ್ ನೀಡಿದರೂ ಎಲ್ಲರೂ ಒಗ್ಗಟ್ಟಾಗಿ ನಮ್ಮ ಅಭ್ಯರ್ಥಿಯ ಗೆಲುವಿಗೆ ಶ್ರಮಿಸುವಂತೆ ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ತಿಳಿಸಿದರು.

ಗುರುವಾರದಂದು ತಾಲೂಕಿನ ಕಲ್ಲೋಳಿ ಪಟ್ಟಣದಲ್ಲಿ ಕಲ್ಲೋಳಿ ಸೌಹಾರ್ದ ಸಹಕಾರಿ ಬ್ಯಾಂಕಿನ ಸಭಾ ಗೃಹದಲ್ಲಿ ಜರುಗಿದ ಅರಭಾವಿ ಕ್ಷೇತ್ರದ ಬಿಜೆಪಿ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲೆಯ ಎಲ್ಲ ನಾಯಕರು ಬಿಜೆಪಿ ಹೈಕಮಾಂಡ್ ನಿರ್ಣಯಕ್ಕೆ ಬದ್ದರಾಗಿ ಚುನಾವಣೆಯ ಕೆಲಸ ಮಾಡೋಣವೆಂದು ಹೇಳಿದರು.

ಪ್ರಧಾನಿ ನರೇಂದ್ರ ಮೋದಿಯವರು ಈ ದೇಶದ ಮತ್ತೊಮ್ಮೆ ಪ್ರಧಾನ ಮಂತ್ರಿಯಾಗಬೇಕೆಂಬುವದು ಇಡೀ ದೇಶದ ಜನರ ಸಂಕಲ್ಪವಾಗಿದೆ. ನಮ್ಮ ಗುರಿ ಮತ್ತೊಮ್ಮೆ ಮೋದಿಯವರು ಪ್ರಧಾನಿಯಾಗಬೇಕು. ಮೂರನೇ ಬಾರಿಗೆ ಕೇಂದ್ರದಲ್ಲಿ ಬಿಜೆಪಿ ಅಧಿಕಾರಕ್ಕೆ ಬರಬೇಕೆಂಬುದು. ಈ ನಿಟ್ಟಿನಲ್ಲಿ ಬೆಳಗಾವಿ ಲೋಕಸಭಾ ಕ್ಷೇತ್ರದಲ್ಲಿ ಈ ಬಾರಿಯೂ ಕಮಲ ಅರಳಬೇಕು. ಅಭ್ಯರ್ಥಿ ಯಾರೇ ಕಣಕ್ಕಿಳಿದರೂ ಪಕ್ಷದ ಹಿತದೃಷ್ಟಿಯಿಂದ ಜಿಲ್ಲೆಯ ಎಲ್ಲ ವಿಧಾನಸಭಾ ಮತಕ್ಷೇತ್ರಗಳ ಮುಖಂಡರುಗಳು ಒಂದಾಗಿ ಪ್ರಚಾರ ಕಾರ್ಯದಲ್ಲಿ ತೊಡಗಬೇಕು. ನಮಗೆ ಅಭ್ಯರ್ಥಿ ಯಾರು ಆಗುತ್ತಾರೆಂಬುವದು ಮುಖ್ಯವಲ್ಲ. ಅಭ್ಯರ್ಥಿ ಪರ ಗೆಲುವಿಗೆ ನಾವೆಲ್ಲರೂ ಶ್ರಮಿಸೋಣ. ಮತ್ತೊಮ್ಮೆ ಬಿಜೆಪಿ ಬಾವುಟವನ್ನು ಹಾರಿಸುವ ಮೂಲಕ ಮೋದಿಯವರ ಕೈ ಬಲಪಡಿಸೋಣ ಎಂದು ತಿಳಿಸಿದರು.

ಮೆ-7ರಂದು ನಡೆಯುವ ದ್ವಿತೀಯ ಹಂತದ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿ ಗೆಲುವಿಗೆ ಕಲ್ಲೋಳಿಯಿಂದಲೇ ಪ್ರಚಾರ ಕಾರ್ಯ ನಡೆದಿರುವುದು ಸಂತಸ ಮೂಡಿಸಿದೆ. ಈಗಿರುವ ಬೂತಮಟ್ಟದ ಕಾರ್ಯಕರ್ತರ ಯಾದಿಯನ್ನು ಪರಿಷ್ಕರಣೆ ಮಾಡಿ ಗೆಲುವಿಗೆ ಸುಗಮ ಹಾದಿಯನ್ನು ಹುಡುಕಬೇಕು. ಕ್ಷೇತ್ರದಾದ್ಯಂತ ಕಾರ್ಯಕರ್ತರನ್ನು ನಿಯೋಜನೆ ಮಾಡಿ ಅಭ್ಯರ್ಥಿಯ ಗೆಲುವಿಗೆ ಮುನ್ನುಡಿ ಬರೆಯಬೇಕು. ಕಾರ್ಯಕರ್ತರಿಂದಲೇ ಬಿಜೆಪಿಯು ವಿಶ್ವದಾದ್ಯಂತ ದೊಡ್ಡ ಪಕ್ಷವಾಗಿ ಬೆಳೆದಿದೆ ಎಂದು ಹೇಳಿದರು.



ಪಂ. ಜವಾಹರಲಾಲ ನೆಹರು ಅವರು ಪ್ರಧಾನಿಯಾಗಬೇಕೆಂಬ ಏಕಮೇವ ಉದ್ದೇಶದಿಂದ ಭಾರತವನ್ನು ಇಬ್ಭಾಗ ಮಾಡಿದರು. ಭಾರತವು ಇರಾನ ದೇಶದವ-ರಿಗೆ ವಿಸ್ತರಣೆಯಿತ್ತು. ಪಾಕಿಸ್ತಾನ, ಬಾಂಗ್ಲಾ, ದೇಶಗಳನ್ನು ನಮ್ಮ ದೇಶದಿಂದ ಒಡೆದು ಭಾರತೀಯರ ಮನಸ್ಸುಗಳನ್ನು ಕೆಡಿಸಿದರು. ಹಿಂದು-ಮುಸ್ಲಿಂ ಬಾಂಧವರಲ್ಲಿ ಮತೀಯ ಕಿಚ್ಚು ಹಚ್ಚುತ್ತಿರುವ ಕಾಂಗ್ರೇಸ್ ಪಕ್ಷದ ಸ್ಥಿತಿ ಏನಾಗಿದೆ ಎಂಬುದು ಇಡೀ ದೇಶಕ್ಕೆ ಗೊತ್ತಿದೆ. ಆದರೇ ಪ್ರಧಾನಿ ನರೇಂದ್ರ ಮೋದಿಯವರು “ಸಬ್ ಕಾ ಸಾಥ್ ಸಬ್ ಕಾ ವಿಕಾಸ್” ಎನ್ನುವ ಧ್ಯೇಯದೊಂದಿಗೆ ಇಡೀ ದೇಶದಲ್ಲಿರುವ ಎಲ್ಲ ಸಮುದಾಯಗಳ ಜನರ ವಿಕಾಸಕ್ಕಾಗಿ ಶ್ರಮಿಸುತ್ತಿದ್ದಾರೆಂದು ಅವರು ಶ್ಲಾಘಿಸಿದರು.

ಮಾಜಿ ಶಾಸಕ ಸಂಜಯ ಪಾಟೀಲ ಮಾತನಾಡಿ, ಬೆಳಗಾವಿ ಲೋಕಸಭಾ ಕ್ಷೇತ್ರದ ಟಿಕೇಟ್ ಆಕಾಂಕ್ಷಿಯಾಗಿದ್ದೇನೆ. ಈ ಹಿಂದೆ ಶಾಸಕನಾಗಿ ಕೆಲಸ ಮಾಡಿದ್ದೇನೆ. ಪಕ್ಷ ಯಾರಿಗೆ ಟಿಕೇಟ್ ನೀಡಿದರೂ ಶಿಸ್ತಿನ ಸಿಪಾಯಿಯಾಗಿ ಅಭ್ಯರ್ಥಿ ಗೆಲುವಿಗೆ ಶ್ರಮಿಸುತ್ತೇನೆ. ನನಗೂ ಸಂಸದನಾಗಬೇಕೆಂಬ ಆಕಾಂಕ್ಷೆ ಇದೆ. ಆದ-ರೇ ವರಿಷ್ಠರ ತೀರ್ಮಾನಕ್ಕೆ ಬದ್ಧನಾಗಿರುವೆ. ಆದರೆ ನನ್ನ ಉಸಿರು ಇರುವ ತನಕ ಬಿಜೆಪಿ ಬಿಟ್ಟು ಇನ್ನೊಂದು ಪಕ್ಷಕ್ಕೆ ಹೋಗಲಾರೆ. ಅಧಿಕಾರದ ಲಾಲಸೆಗಾಗಿ ಕೆಟ್ಟ ದುರಾಲೋಚನೆ ಮಾಡಲಾರೆ. ದೇಶಭಕ್ತ ಪಕ್ಷವಾಗಿರುವ ಬಿಜೆಪಿಯು ನನ್ನ ಉಸಿರು ಎಂದು ಹೇಳಿದ ಅವರು, ಶಾಸಕರಾದ ರಮೇಶ ಜಾರಕಿಹೊಳಿ ಮತ್ತು ಬಾಲಚಂದ್ರ ಜಾರಕಿಹೊಳಿ ಅವರು ಈ ಚುನಾವಣೆಯಲ್ಲಿ ಸುಮಾರು 1.40 ಲಕ್ಷ ಮತಗಳ ಮುನ್ನಡೆಯನ್ನು ಪಕ್ಷದ ಅಭ್ಯರ್ಥಿಗೆ ನೀಡಲಿದ್ದಾರೆ. ಇವರುಗಳು ಬಿಜೆಪಿ ಆಸ್ತಿಯೆಂದು ಬಣ್ಣಿಸಿದರು.

ಬೆಳಗಾವಿ(ಗ್ರಾ) ಜಿಲ್ಲಾಧ್ಯಕ್ಷ ಸುಭಾಶ ಪಾಟೀಲ ಮಾತನಾಡಿ, ಕೇಂದ್ರ ಸರ್ಕಾರದ ಸಾಧನೆಗಳನ್ನು ಮತದಾರರ ಮುಂದಿಟ್ಟುಕೊಂಡು ಪಕ್ಷದ ಅಭ್ಯರ್ಥಿ ಗೆಲುವಿಗೆ ಕಾರ್ಯಕರ್ತರು ದುಡಿಯಬೇಕು. ಅರಭಾವಿ ಮತ್ತು ಗೋಕಾಕ ಕ್ಷೇತ್ರದಲ್ಲಿ ಅಭ್ಯರ್ಥಿಗೆ ಹೆಚ್ಚಿನ ಮುನ್ನಡೆ ಮತಗಳನ್ನು ನೀಡೋಣವೆಂದು ತಿಳಿಸಿದರು.

ವೇದಿಕೆಯಲ್ಲಿ ಜಯಪ್ರಕಾಶ, ಜಿ.ಪಂ ಮಾಜಿ ಅಧ್ಯಕ್ಷ ಬಸಗೌಡ ಪಾಟೀಲ, ಅರಭಾವಿ ಮಂಡಲ ಅಧ್ಯಕ್ಷ ಮಹಾದೇವ ಶೆಕ್ಕಿ, ಲಕ್ಷ್ಮಣ ತಪಸಿ, ಡಾ॥ ಕೆ.ವಿ.ಪಾಟೀಲ, ಬಿಡಿಸಿಸಿ ಬ್ಯಾಂಕ್ ನಿರ್ದೇಶಕ ನೀಲಕಂಠ ಕಪ್ಪಲಗುದ್ದಿ, ಮುತ್ತೆಪ್ಪ ಮನ್ನಾಪೂರ, ರಾಮಣ್ಣ ಹಂದಿಗುಂದ, ರವೀಂದ್ರ ಸಣ್ಣಕ್ಕಿ, ಸುಭಾಶ ಕುರಬೇಟ, ಹಣಮಂತ ಗುಡ್ಲಮನಿ, ಪರಸಪ್ಪ ಬಬಲಿ, ಶಿವಾನಂದ ಕಮತಿ, ಮುತ್ತೆಪ್ಪ ಕುಳ್ಳೂರ, ಇಂದಿರಾ ಅಂತರಗಟ್ಟಿ, ಬಿ.ಬಿ.ದಾಸನವರ, ಮಲ್ಲಪ್ಪ ಹೆಬ್ಬಾಳ, ಮಹಾಂತೇಶ ಕುಡಚಿ, ಅನ್ವರ ನದಾಫ, ವಸಂತ ತಹಶಿಲ್ದಾರ, ಪರಪ್ಪ ಕಡಾಡಿ, ಪಕ್ಷದ ವಿವಿಧ ಮೋರ್ಚಾಗಳ ಪದಾಧಿಕಾರಿಗಳು ಹಾಗೂ ಮುಖಂಡರು ಇದ್ದರು.

ನಂತರ ಚುನಾವಣಾ ನಿರ್ವಹಣಾ ಸಮಿತಿಯ ಸಭೆಯನ್ನು ಪಕ್ಷದ ಮುಖಂಡರು ನಡೆಸಿದರು.

## ಭ್ರೂಣ ಹತ್ಯೆ ಪ್ರಕರಣ ಬಯಲು ಮಾಡಿದ ಅಧಿಕಾರಿಗೆ ಡಿಹೆಚ್ಒ ಕಿರುಕುಳ



ದೇವನಹಳ್ಳಿ: ಹೊಸಕೋಟೆ ಮತ್ತು ನೆಲಮಂಗಲದಲ್ಲಿ ಭ್ರೂಣಹತ್ಯೆ ಪ್ರಕರಣವನ್ನು ಬಯಲು ಮಾಡಿದ ಅಧಿಕಾರಿಯೊಬ್ಬರಿಗೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಡಿಹೆಚ್ಒ ಸುನೀಲ್ ಕುಮಾರ್ ಕಿರುಕುಳ ನೀಡುತ್ತಿರುವ ಆರೋಪ ಕೇಳಿಬಂದಿದೆ. ಅಲ್ಲದೆ, ಕಿರುಕುಳದಿಂದ ಬೇಸತ್ತ ಅಧಿಕಾರಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಆಯುಕ್ತರಿಗೆ ಪತ್ರ ಬರೆದಿದ್ದಾರೆ.

ಹೊಸಕೋಟೆ ಮತ್ತು ನೆಮಂಗಲದಲ್ಲಿ ನಡೆಯುತ್ತಿದ್ದ ಭ್ರೂಣ ಹತ್ಯೆ ಪ್ರಕರಣವನ್ನು ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಮಂಜುನಾಥ್ ಅವರು ಬಯಲು ಮಾಡಿದ್ದರು. ಆದರೆ, ಜಿಲ್ಲಾ ಆರೋಗ್ಯಾಧಿಕಾರಿ ಸುನೀಲ್ ಕುಮಾರ್, ಜಿಲ್ಲೆಯ ಮತ್ತಷ್ಟು ಆಸ್ಪತ್ರೆಗಳ ಲೋಪದೋಷ ಹಾಗೂ ಗರ್ಭಪಾತ ಕರ್ಮಕಾಂಡದ ಬಗ್ಗೆ ಬಯಲು ಮಾಡದಂತೆ ಮಂಜುನಾಥ್ ಅವರಿಗೆ ಕಿರುಕುಳ ನೀಡುತ್ತಿರುವ ಆರೋಪ ಕೇಳಿಬಂದಿದೆ.

ಮೂರು ದಿನಗಳಿಗೊಮ್ಮೆ ನೋಟಿಸ್ ನೀಡುತ್ತಾ ಆಸ್ಪತ್ರೆಗಳ ಲೋಪದೋಷ ವರದಿ ನೀಡದಂತೆ ಕಿರುಕುಳ ನೀಡುತ್ತಿದ್ದಾರೆ ಎಂದು ಮಂಜುನಾಥ್ ಅವರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಆಯುಕ್ತರಿಗೆ ಪತ್ರ ಬರೆದಿದ್ದಾರೆ. ಈ ಹಿಂದೆ ನೆಲಮಂಗಲದ ಆಸರೆ ಆಸ್ಪತ್ರೆಯ 74 ಗರ್ಭಪಾತದ ವರದಿ ಮಾಡದಂತೆ ಸುನೀಲ್ ಕುಮಾರ್ ಒತ್ತಡ ಹಾಕಿದ್ದಾರೆ ಎಂದು ಆರೋಪಿಸಲಾಗಿದೆ.

ಒತ್ತಡದ ನಡುವೆಯು ಆಸ್ಪತ್ರೆಯ ಕರ್ಮಕಾಂಡ ಬಯಲು ಮಾಡಿ ಕೇಸ್ ದಾಖಲಿಸಿದಕ್ಕೆ ಮಂಜುನಾಥ್ ಅವರಿಗೆ ಕಿರುಕುಳ ನೀಡಿದ್ದಾರೆ. ಅಷ್ಟೇ ಅಲ್ಲದೆ, ಮಂಜುನಾಥ್ ಅವರು ಹೊಸಕೋಟೆಯ ಓವಂ ಆಸ್ಪತ್ರೆಯಲ್ಲೂ MTP ಖಾಯ್ದೆಯಡಿ ಅನುಮತಿ ಪಡೆಯದೆ ಗರ್ಭಪಾತ ಪ್ರಕರಣ ಪತ್ತೆ ಮಾಡಿದ್ದಾರೆ. ಈ ಬಗ್ಗೆ ವರದಿ ಮಾಡಿ ಬಯಲು ಮಾಡದಂತೆ ಡಿಹೆಚ್ಒ ಸುನೀಲ್ ಅವರು ಕಿರುಕುಳ ನೀಡಿದ್ದಾಗಿ ಪತ್ರದಲ್ಲಿ ಆರೋಪಿಸಲಾಗಿದೆ.

## ವಿಧಾನ ಪರಿಷತ್ ಸ್ಥಾನಕ್ಕೆ ಜೆಡಿಎಸ್ ನ ಮರಿತಿಬ್ಬೇಗೌಡ ರಾಜೀನಾಮೆ

ಹುಬ್ಬಳ್ಳಿ: ವಿಧಾನ ಪರಿಷತ್ತು ಜೆಡಿಎಸ್ ಸದಸ್ಯ ಮ-ರಿತಿಬ್ಬೇಗೌಡ ಅವರು ತಮ್ಮ ಸದಸ್ಯತ್ವಕ್ಕೆ ರಾಜೀನಾಮೆ ನೀಡಿದರು. ವಿಧಾನಪರಿಷತ್ತು ಸಭಾಪತಿ ಬಸವರಾಜ ಹೊರಟ್ಟಿ ಅವರಿಗೆ ರಾಜೀನಾಮೆ ಸಲ್ಲಿಸಿದ್ದಾರೆ.

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಮರಿತಿಬ್ಬೇಗೌಡ, ನಾನು ಸ್ವಇಚ್ಛೆಯಿಂದ ಪರಿಷತ್ತು ಸದಸ್ಯತ್ವಕ್ಕೆ ರಾಜೀನಾಮೆ ನೀಡಿದ್ದೇನೆ. ಜೆಡಿಎಸ್ ನಲ್ಲಿ ಜಾತ್ಯತೀತ ತತ್ವಗಳು ಉಳಿದಿಲ್ಲ. ನಿಷ್ಠಾವಂತ ಕಾರ್ಯಕರ್ತರಿಗೆ ಬೆಲೆ ಇಲ್ಲದಂತಾಗಿದೆ. ಈ ಬಗ್ಗೆ ಪಕ್ಷದ ವರಿಷ್ಠರಿಗೆ ಹಲವು ಬಾರಿ ಮನವಿ ಮಾಡಿದರೂ ಪ್ರಯೋಜವಾಗಿಲ್ಲ ಎಂದರು.

ನಾಲ್ಕು ಬಾರಿ ದಕ್ಷಿಣ ಶಿಕ್ಷಕರ ಕ್ಷೇತ್ರದ ಪ್ರತಿನಿಧಿಯಾಗಿ ಆಯ್ಕೆಯಾಗಿದ್ದೇನೆ. ಅಧಿವೇಶನದಲ್ಲಿ ವಿಷಯಾಧಾ-ರಿತವಾಗಿ ಬೆಂಬಲ ನೀಡಿದ್ದೇನೆ. ಕೃಷಿ, ಎಪಿಎಂಸಿ ಕಾಯ್ದೆಗಳ ವಿಚಾರದಲ್ಲಿ ಜೆಡಿಎಸ್ ಅಂದಿನ ಆಡಳಿತ ಪಕ್ಷದ ಪರ ನಿಂತಿತು. ಆದರೆ ನಾನು ಆತ್ಮಸಾಕ್ಷಿ ಅನುಗುಣವಾಗಿ ರೈತರ ಪರ ನಿಲುವು ತಳೆದಿದ್ದೆ. ಜೆಡಿ-ಎಸ್ ನಲ್ಲಿ ಯಾವುದೇ ಪ್ರಮುಖ ತೀರ್ಮಾನಗಳಲ್ಲಿ ಪಕ್ಷದ ಶಾಸಕರು, ನಾಯಕರನ್ನು ಕೇಳುತ್ತಿಲ್ಲ. ಎಚ್.ಡಿ.ದೇವೇಗೌಡ, ಎಚ್.ಡಿ.ಕುಮಾರಸ್ವಾಮಿ ಅವರೇ ನಿರ್ಣಯಿಸುತ್ತಾರೆ ಎಂದರು.



ಮಂಡ್ಯದಲ್ಲಿ ಹಿಂದೆ ಲೋಕಸಭೆಗೆ ನಿಖಿಲ್ ಕುಮಾರಸ್ವಾಮಿ ಸ್ಪರ್ಧೆ ಬೇಡ ಎಂದಿದ್ದಕ್ಕೆ ಪಕ್ಷ ವರಿಷ್ಠರು ನನ್ನ ಮೇಲೆ ಕೆಂಗಣ್ಣು ಬೀರಿ, ಪಕ್ಷದ ಕಾರ್ಯಕ್ರಮಗಳಿಂದ ದೂರ ಇರಿಸಿದ್ದು ನಾಲ್ಕು ವರ್ಷಗಳಿಂದ ನನ್ನನ್ನು ದೂರ ಇರಿಸಲಾಗಿದೆ ಎಂದರು. ಜೆಡಿಎಸ್ ಬಿಜೆಪಿ ಜತೆ ಹೊಂದಾಣಿಕೆ ಮೊಸಳೆ ಮೇಲಿನ ಸವಾರಿಯಾಗಿದೆ ಎಂದರು. ನನ್ನ ಮುಂದಿನ ರಾಜಕೀಯ ನಿರ್ಧಾರ ಎರಡು ದಿನಗಳಲ್ಲಿ ತೀರ್ಮಾನ ಪ್ರಕಟಿಸುವೆ ಎಂದು ನುಡಿದರು.

ಮತ್ತೊಬ್ಬರು ರಾಜೀನಾಮೆ ಸಾಧ್ಯತೆ: ವಿಧಾನ ಪರಿಷತ್ತು ಸದಸ್ಯ ಮರಿತಿಬ್ಬೇಗೌಡ ಅವರು ತಮ್ಮ ಸದಸ್ಯತ್ವಕ್ಕೆ ನೀಡಿದ ರಾಜೀನಾಮೆ ಅಂಗೀಕರಿಸಿದ್ದೇನೆ ಎಂದು ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದರು.

ಮರಿತಿಬ್ಬೇಗೌಡ ಅವರು ಸ್ವ ಇಚ್ಛೆಯಿಂದ ರಾಜೀನಾಮೆ ನೀಡಿದ್ದಾಗಿ ಹೇಳಿದ್ದಾರೆ. ನಿಯಮದಂತೆ ರಾಜೀನಾಮೆ ಅಂಗೀಕರಿಸಿದ್ದು, ಇಂದಿನಿಂದ ಅವರು ಪರಿಷತ್ತು ಸದಸ್ಯರಲ್ಲ. ನನ್ನ ಅವಧಿಯಲ್ಲಿ ಒಟ್ಟು 11 ಜನ ಸದಸ್ಯರು ರಾಜೀನಾಮೆ ನೀಡಿದ್ದು ಇದೊಂದು ದಾಖಲೆಯಾಗಿದೆ.

ಇನ್ನೆರಡು ದಿನಗಳಲ್ಲಿ ಮತ್ತೊಬ್ಬ ಸದಸ್ಯರು ರಾಜೀನಾಮೆ ನೀಡುವ ಸಾಧ್ಯತೆಯಿದೆ ಎಂದರಾದರೂ ಅವರು ಯಾರು ಎಂದು ಹೇಳಲಿಲ್ಲ. ವಿಧಾನ ಮಂಡಲ ಅಧಿವೇಶನ ವರ್ಷದಲ್ಲಿ ಕನಿಷ್ಠ 60 ದಿನ ನಡೆಯಬೇಕೆಂಬ ನಿಯಮ ಇದೆ. ಆದರೆ ಅದು ಆಗುತ್ತಿಲ್ಲ ಎಂಬ ನೋವು ಇದೆ. ಅಧಿವೇಶನದಲ್ಲಿ ಆಡಳಿತ-ವಿಪಕ್ಷ ಸದ್ಯರು ವಿವಾದ, ಗದ್ದಲಕ್ಕೆ ಅವಕಾಶ ನೀಡದೆ ವಿಷಯಗಳ ಮೇಲೆ ಗಂಭೀರ ಚರ್ಚೆ ಆಗುವಂತಾಗಬೇಕಾಗಿದೆ ಎಂದರು.

## ನಮ್ಮ ಜಿಲ್ಲೆಯ ವೀಣಾ ಕಾಶಪ್ಪನವರಿಗೆ ಟಿಕೆಟ್ ನೀಡಿ : ಬಸವರಾಜ ಜಮಖಂಡಿ

ಮುಧೋಳ : ಬಾಗಲಕೋಟೆ ಜಿಲ್ಲೆಯ ಎಲ್ಲರೊಂದಿಗೆ ಉತ್ತಮ ಒಡನಾಟ ಹೊಂದಿರುವ, ಎಲ್ಲರೊಂದಿಗೆ ನಿರಂತರವಾಗಿ ಸಂಪರ್ಕದಲ್ಲಿರುವ ನಮ್ಮ ಜಿಲ್ಲೆಯ ಮಗಳಾದ ವೀಣಾ ಕಾಶಪ್ಪನವರ ಅವರಿಗೇ ಬಾಗಲಕೋಟೆ ಲೋಕಸಭಾ ಟಿಕೆಟ್ ನೀಡಬೇಕೆಂದು ಕಾಂಗ್ರೆಸ್ ಮುಖಂಡ ಬಸವರಾಜ ಜಮಖಂಡಿ ಆಗ್ರಹಿಸಿದರು.

ನಗರದ ಕಾನಿಪ ಕಾರ್ಯಾಲಯದಲ್ಲಿ ನಡೆದ ಸುದ್ಧಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ಐದು ವರ್ಷಗಳ ಹಿಂದೆ ಲೋಕಸಭಾ ಚುನಾವಣೆಯಲ್ಲಿ ಪರಾಭವಗೊಂಡರೂ ಧೃತಿಗೆಡದೆ ಹಗಲಿರುಳು, ಜಿಲ್ಲೆಯಾದ್ಯಾಂತ ಸಂಚರಿಸಿ ಪಕ್ಷವನ್ನು ತಳಮಟ್ಟದಿಂದ ಸಂಘಟನೆ ಮಾಡುತ್ತ, ತನ್ನದೇಯಾದ ಅಪಾರ ಬಳಗವನ್ನು ಕಟ್ಟಿಕೊಂಡು ಎಲ್ಲ ಸಮುದಾಯದವರೊಂದಿಗೆ




ಉತ್ತಮ ಬಾಂಧವ್ಯ ಹೊಂದಿರುವ ವೀಣಕ್ಕಾ ಎಂದೇ ಎಲ್ಲರಿಗೂ ಚಿರಪರಿಚಿತರಾಗಿರುವ ಅವರು ಈ ಬಾರಿ ಖಂಡಿತವಾಗಿಯೂ ಗೆಲ್ಲುವ ಹುಮ್ಮಸ್ಸಿನಲ್ಲಿದ್ದರು.

ಆದರೆ ಈಗ ಇದ್ದಕ್ಕಿದ್ದಂತೆ ಬೇರೆ ಜಿಲ್ಲೆಯವರಿಗೆ ಕೈ ನಾಯಕರು ಮನೆಹಾಕಿದ್ದು, ಇದರಿಂದ ಸುಲಭವಾಗಿ ಗೆಲ್ಲಬಹುದಾಗಿದ್ದ ನಮ್ಮ ಜಿಲ್ಲೆಯ ಅಭ್ಯರ್ಥಿಗೆ ತೀವ್ರ ನಿರಾಸೆಯನ್ನುಂಟು ಮಾಡಿದ್ದಾರೆ.

ಈಗಲೂ ಕಾಲ ಮಿಂಚಿಲ್ಲ. ಹೈಕಮಾಂಡ ಹಾಗೂ ರಾಜ್ಯದ ಕಾಂಗ್ರೆಸ್ ಅಗ್ರ ಮುಖಂಡರು ವೀಣಾ ಕಾಶಪ್ಪನವರ ಅವರಿಗೇ ಟಿಕೇಟ್ ನೀಡಿದರೆ ಈ ಬಾರಿ ಗೆಲುವ ನಿಶ್ಚಿತ. ಅವರ ಗೆಲುವಿಗಾಗಿ ಹಾಗೂ ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಗಾಗೆ ವಿವಿಧ ಸಂಘಟನೆಗಳು, ಅಪಾರ ಅಭಿಮಾನಿಗಳು ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಭಾರೀ ಹುಮ್ಮಸ್ಸಿನಿಂದ ಕಾರ್ಯ ನಿರ್ವಹಿಸುತ್ತಾರೆ ಎಂದು ಅವರು ಆತ್ಮವಿಶ್ವಾಸದಿಂದ ಹೇಳಿದರು.

ಲಕ್ಷ್ಮೀ ದುಂಡಪ್ಪ ಲೋಣಿ ಮಾತನಾಡಿ, ಕಾಂಗ್ರೆಸ್ ಪಕ್ಷದ ಎಲ್ಲ ಧುರಿಣರಲ್ಲಿ ಹಾಗೂ ಬಾಗಲಕೋಟ ಜಿಲ್ಲಾ ಉಸ್ತುವಾರಿ ಸಚಿವರಾದ ಆರ್.ಬಿ.ತಿಮ್ಮಾಪೂರ ಅವರು ವಿಶೇಷ ಮುತವರ್ಜಿ ವಹಿಸಿ ವೀಣಾ ಕಾಶಪ್ಪನವರ ಅವರಿಗೇ ಟಿಕೇಟ್ ನೀಡಬೇಕೆಂದು ಕೈಮುಗಿದು ಮನವಿ ಮಾಡುತ್ತೇವೆ ಎಂದು ತಿಳಿಸಿದರು.

ಕಾಂಗ್ರೆಸ್ ಧುರೀಣರಾದ ಬಾಳಪ್ಪ ವೆಂಕಪ್ಪ ಬಿ.ಪಾಟೀಲ, ಶ್ರೀಕಾಂತ ಪೂಜಾರಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಚೆಕ್ಪೋಸ್ಟ್ ಗಳಿಗೆ ಡಿಸಿ ಭೇಟಿ : 8 ಮಂದಿ ನೌಕರರಿಗೆ ಶಾಕ್ ನೀಡಿದ ಜಿಲ್ಲಾಧಿಕಾರಿ ಸಿ ಸತ್ಯಭಾಮ

ಹಾಸನ : ಜಿಲ್ಲಾ ಚುನಾವಣಾಧಿಕಾರಿ ಸಿ ಸತ್ಯಭಾಮ ಚೆಕ್ ಪೋಸ್ಟ್ ಗಳಿಗೆ ದಿಢೀರ್ ಕಾರ್ಯಾಚರಣೆಗಾಗಿ ತೆರೆಳಿದ್ದು, ಸಿಬ್ಬಂದಿಗಳ ಕೆಲ ಲೋಪದಿಂದ ಎಂಟು ಮಂದಿ ಸರ್ಕಾರಿ ನೌಕರರಿಗೆ ನೋಟೀಸ್ ಜಾರಿ ಮಾಡಿದ್ದಾರೆ.

ಹಾಸನ ಲೋಕಸಭಾ ಚುನಾವಣೆ ಹಿನ್ನೆಲೆ ಚೆಕ್‌ಪೋಸ್ಟ್‌ಗಳಿಗೆ ಜಿಲ್ಲಾಧಿಕಾರಿ ಸಿ ಸತ್ಯಭಾಮ ಹಾಗೂ ಎಸ್ಪಿ ಸೂಜಿತ ಮೊಹಮ್ಮದ್ ದಿಢೀರ್ ಬೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಚನ್ನರಾಯಪಟ್ಟಣ, ಅರಕಲಗೂಡು ತಾಲ್ಲೂಕಿನ ಗಡಿ ಭಾಗಗಳಲ್ಲಿ ಹಾಕಿರುವ ಚೆಕ್ ಪೋಸ್ಟ್ ಬಳಿ ಕೆಲ ಹೊತ್ತು ದೂರದಲ್ಲಿ ನಿಂತು ಅಲ್ಲಿ ಕಾರ್ಯ ನಿರ್ವಹಿಸುತ್ತಿರುವವರ ಕಾರ್ಯವೈಖರಿ ವೀಕ್ಷಿಸಿದ್ದಾರೆ.

ಕಾರ್ಯಚರಣೆ ವೇಳೆ ಸಿಬ್ಬಂದಿಗಳು ವಾಹನ ತಪಾಸಣೆ ಮಾಡುವ ಬದಲಾಗಿ ತಮ್ಮ ಮೊಬೈಲ್‌ಗಳನ್ನು ನೋಡುತ್ತಾ ಕುಳಿತು, ಬೇಜವಬ್ದಾರಿಯಿಂದ ಕೆಲಸ ನಿರ್ವಹಿಸುತ್ತಿರುವುದು ಕಂಡು ಬಂದಿದೆ. ಈ ಹಿನ್ನೆಲೆಯಲ್ಲಿ ತಕ್ಷಣವೇ ಎಂಟು ಮಂದಿ ಸರ್ಕಾರಿ ನೌಕರರಿಗೆ ನೋಟೀಸ್



ಜಾರಿ ಮಾಡಿದ್ದಾರೆ. ಇದೇ ರೀತಿ ಮುಂದೆ ತಪ್ಪುಗಳು ಕಂಡು ಬಂದಲ್ಲಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುತ್ತೇನೆ. ತೀವ್ರ ನಿಗವಹಿಸಿ ಕಾರ್ಯನಿವಹಿಸಬೇಕು. ಯಾವುದೇ ಒಂದು ಸಣ್ಣ ಲೋಪವಾಗಬಾರದು ಎಂದಿ ಎಚ್ಚರಿಕೆ ಜಿಲ್ಲಾ ಚುನಾವಣಾಧಿಕಾರಿ ನೀಡಿದರು.

ಜಿಲ್ಲೆಯಾದ್ಯಂತ 22 ಚೆಕ್ ಪೋಸ್ಟ್‌ಗಳನ್ನು ತೆರೆಯಲಾಗಿದ್ದು ಯಾವುದೇ ಅಕ್ರಮಗಳಿಗೆ ಅಸ್ಪದನೀಡಬಾರದು, ಕಟ್ಟುನಿಟ್ಟಾಗಿ ಕೆಲಸ ನಿರ್ವಹಿಸಬೇಕು ಎಂದು ಚೆಕ್ ಪೋಸ್ಟ್ ಸಿಬ್ಬಂಧಿಗಳಿಗೆ ತಿಳಿಸಿದ್ದಾರೆ.

## ಶ್ರೀ ಡಾ. ಶಿವಾನಂದ ಭಾರತಿ ಸ್ವಾಮೀಜಿ ಆಶೀರ್ವಾದ ಪಡೆದ ರಾಹುಲ್ ಜಾರಕಿಹೊಳಿ



ರಾಯಬಾಗ: ರಾಯಬಾಗ ವಿಧಾನಸಭಾ ಕ್ಷೇತ್ರದ ಜಾಗನೂರ ಗ್ರಾಮದ ಶ್ರೀ ಸಿದ್ಧಾರೂಢ ಮಠಕ್ಕೆ ಇಂದು ಯುವ ನಾಯಕ, ಸತೀಶ್ ಶುಗರ್ಸ್ ನಿರ್ದೇಶಕ ರಾಹುಲ್ ಜಾರಕಿಹೊಳಿ ಅವರು ಭೇಟಿ ನೀಡಿ ಸುಕ್ಷೇತ್ರ ಇಂಚಲದ ಶಿವಯೋಗೀಶ್ವರ ಸಾಧು ಸಂಸ್ಥಾನ ಮಠದ ಡಾ. ಶಿವಾನಂದ ಭಾರತಿ ಸ್ವಾಮೀಜಿ ಅವರ ಆಶೀರ್ವಾದ ಪಡೆದರು.

ನಂತರ ತಾಲೂಕಿನ ಜಾಗನೂರ, ಕಂಕಣವಾಡಿ, ಹುಬ್ಬರವಾಡಿ ಗ್ರಾಮದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರ ಹಾಗೂ ಕಾರ್ಯಕರ್ತರ ಸಭೆಯಲ್ಲಿ ಭಾಗವಹಿಸಿ, ಸನ್ಮಾನ ಸ್ವೀಕರಿಸಿ ಮಾತನಾಡಿದ ಯುವ ನಾಯಕ ರಾಹುಲ್ ಜಾರಕಿಹೊಳಿ, ಚಿಕ್ಕೋಡಿ ಲೋಕಸಭೆ ಕಾಂಗ್ರೆಸ್ ಅಭ್ಯರ್ಥಿ ಗೆಲುವಿಗೆ ಇಂದಿನಿಂದಲೇ ಕಾರ್ಯಕರ್ತರು ಸೈನಿಕರಂತೆ ಕೆಲಸ ಮಾಡಿ, ಬೂತ್ ಮಟ್ಟದಲ್ಲಿ ಪಕ್ಷ ಸಂಘಟನೆ ಮಾಡಬೇಕೆಂದು ಮನವಿ ಮಾಡಿದರು.

ರಾಜ್ಯದಲ್ಲಿ ಕಾಂಗ್ರೆಸ್ ಪರ ಅಲೆ ಇದೆ. ಕಾರಣ ಈ ಅವಕಾಶವನ್ನು ಸದುಪಯೋಗ ಪಡೆಯುವ ಮೂಲಕ ಚಿಕ್ಕೋಡಿ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷದ ಬಾವುಟ ಹಾ-ರಿಸೋಣ ಎಂದರು. ಇದೇ ವೇಳೆ ಕಾಂಗ್ರೆಸ್ ಕಾರ್ಯಕರ್ತರು ಯುವ ನಾಯಕ, ಸತೀಶ್ ಶುಗರ್ಸ್ ನಿರ್ದೇಶಕ ರಾಹುಲ್ ಜಾರಕಿಹೊಳಿ ಅವರನ್ನು ಸತ್ಕರಿಸಿದರು. ಹಾಗೂ ಬೈಕ್ ರ್ಯಾಲಿ ಮೂಲಕ ಸ್ವಾಗತಿಸಿದರು. ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡ ಮಹಾವೀರ ಮೋಹಿತೆ, ಅರ್ಜುನ ನಾಯಕವಾಡಿ, ರಾಯಬಾಗ ತಾಲೂಕಿನ ಜಾಗನೂರ, ಕಂಕಣವಾಡಿ, ಹುಬ್ಬರವಾಡಿ ಗ್ರಾಮಗಳ ಮೂಂಚೂಣಿ ಘಟಕದ ಪದಾಧಿಕಾರಿಗಳು ಇದ್ದರು.

## ಯರಗಟ್ಟಿಯಲ್ಲಿ ನಡೆದ ಕಾಂಗ್ರೆಸ್ ಕಾರ್ಯಕರ್ತರ ಸಭೆ

ಬೆಳಗಾವಿ: ಲೋಕಸಭೆಯಲ್ಲಿ ಚುನಾವಣೆ ಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳ ಗೆಲುವಿಗೆ ಈಗಿನಿಂದಲೇ ಕಾರ್ಯಕರ್ತರು ಬೂತ್ ಮಟ್ಟದಲ್ಲಿ ಜಾಗೃತಿಯೊಂದಿಗೆ ಸಂಘಟನೆಗೆ ಶ್ರಮಿಸಬೇಕೆಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಕರೆ ನೀಡಿದರು.

ಯರಗಟ್ಟಿಯಲ್ಲಿ ನಡೆದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ನುಡಿದಂತೆ ನಡೆದಿದೆ, ರಾಜ್ಯದಲ್ಲಿ ಅಧಿಕಾರಕ್ಕೆ ಬಂದ ನಂತರ ಸವದತ್ತಿ ತಾಲೂಕಿಗೆ ಸಾಕಷ್ಟು ಅಭಿವೃದ್ಧಿ ಕೆಲಸಗಳನ್ನು ಮಾಡಿದೆ. ಅಲ್ಲದೇ ಸವದತ್ತಿ ಯಲ್ಲಮ್ಮನ ದೇವಸ್ಥಾನದಲ್ಲಿ ಕುಡಿಯುವ ನೀರಿನ ವ್ಯವಸ್ಥೆ, ವಸತಿ ಗೃಹ, ಶೌಚಾಲಯ ಸೇ-ರಿದಂತೆ ವಿವಿಧ ಅಭಿವೃದ್ಧಿಗೆಂದು ಪ್ರವಾಸೋದ್ಯಮ ಸಚಿವ ಎಚ್. ಕೆ. ಪಾಟೀಲ್ ಅವರು 200 ಕೋಟಿ ರೂ. ಅನುದಾನ



ನೀಡುತ್ತಿದ್ದಾರೆ ಎಂದ ಅವರು, ವಿಧಾನಸಭೆ ಚುನಾವಣೆಗೂ ಮುನ್ನ ಘೋಷಿಸಿದ್ದ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದೆ.

ಲೋಕಸಭಾ ಚುನಾವಣೆಯಲ್ಲಿ ವಿರೋಧ ಪಕ್ಷಗಳಿಂದ ಅಭ್ಯರ್ಥಿ ಯಾರೇ ಆಗಲಿ ನೀವು ತಲೆಕಡೆಸಿಕೊಳ್ಳದೆ ಕಾಂಗ್ರೆಸ್ ಸರ್ಕಾರದ ಜನಪ್ರಿಯ ಯೋಜನೆಗಳ ಕುರಿತು ಜನ-ರಿಗೆ ಮನವರಿಕೆ ಮಾಡಿಕೊಡುವ ಕೆಲಸ ಮಾಡಿ ಎಂದು ಕರೆ ನೀಡಿದರು.

ಕಾಂಗ್ರೆಸ್ ಸರ್ಕಾರ ಮಹಿಳೆ ಯರನ್ನು ಗಮನದಲ್ಲಿಟ್ಟುಕೊಂಡು ಸಾಕಷ್ಟು ಯೋಜನೆಗಳನ್ನು ಜಾರಿಗೆ ತಂದಿದೆ. ಇದನ್ನು ಮನೆಮನೆಗೆ ತಲುಪಿಸುವ ಮೂಲಕ ಲೋಕಸಭೆ ಚುನಾವಣೆಯಲ್ಲಿ ಪಕ್ಷದ ಗೆಲವಿಗೆ ಸಹಕರಿಸಬೇಕು ಎಂದು ಮನವಿ ಮಾಡಿದರು. ಬೇರೆ ಪಕ್ಷಗಳಂತೆ ಚುನಾವಣೆ ಸಂದರ್ಭದಲ್ಲಿ ಭರವಸೆಗಳನ್ನು ನೀಡಿ ಅಧಿಕಾರಕ್ಕೆ ಬಂದ ಮೇಲೆ ಅದನ್ನು ಮರೆಯುವ ಕೆಲಸ ಕಾಂಗ್ರೆಸ್ ಎಂದೂ ಮಾಡಿಲ್ಲ ಎಂದರು.

ಕಾಂಗ್ರೆಸ್ ಸರಕಾರ ಐದು ಗ್ಯಾರಂಟಿಗಳನ್ನು ಯಶಸ್ವಿಯಾಗಿ ಜಾರಿ ಮಾಡುವ ಮೂಲಕ ನಾಡಿನ ಜನರ ಹಿತಕಾಯುವ ಕೆಲಸ ಮಾಡಿದೆ. ಪ್ರತಿಯೊಂದು ಮನೆಯಲ್ಲೂ ಗೃಹಲಕ್ಷ್ಮಿ, ಗೃಹಜ್ಯೋತಿ, ಶಕ್ತಿ, ಅನ್ನಭಾಗ್ಯ ಯೋಜನೆಗಳ ಪಲಾನುಭವಿಗಳಿದ್ದು ಇವರೆಲ್ಲಾ ನಮ್ಮ ಪಕ್ಷಕ್ಕೆ ಆಶೀರ್ವಾದ ಮಾಡುತ್ತಾರೆಂಬ ಭರವಸೆ ಇದೆ. ಕಾಂಗ್ರೆಸ್ ಯೋಜನೆಗಳ ಫಲಾನುಭವಿಗಳಿಗೆ ಸರ್ಕಾರ ಜಾರಿಗೆ ತಂದಿರುವ ಯೋಜನೆಗಳ ಅರಿವು ಮೂಡಿಸುವ ಮಹತ್ತರವಾದ ಜವಾಬ್ದಾರಿ ಮಹಿಳಾ ಮುಖಂಡರು ಹಾಗೂ ಕಾರ್ಯಕರ್ತೆಯರ ಮೇಲಿದೆ ಎಂದರು.

ಬಿಜೆಪಿಯವರ ದುರಾಡಳಿತ ಹಾಗೂ ಕಾಂಗ್ರೆಸ್ ಸಸರ್ಕಾರ ಅವಧಿಯಲ್ಲಿ ಕೈಗೊಂಡಿರುವ ಹಲವಾರು ಜನಪರ ಯೋಜನೆಗಳ ಬಗ್ಗೆ ಮನೆ ಮನೆಗೆ ತೆರಳಿ ಜನರಿಗೆ ತಿಳಿಸುವ ಕೆಲಸವನ್ನು ಕಾರ್ಯಕರ್ತರು ಮಾಡಬೇಕು. ಅಲ್ಲದೇ ಕಾಂಗ್ರೆಸ್ ಕಾರ್ಯಕರ್ತರು ಅಭಿವೃದ್ಧಿ ಹಾಗೂ ಪಕ್ಷ ದ ತತ್ವ ಸಿದ್ಧಾಂತಗಳನ್ನು ಜನರಿಗೆ ಮುಟ್ಟಿಸುವ ಮೂಲಕ ಬೂತ ಮಟ್ಟದಿಂದ ಪಕ್ಷ ಸಂಗಟಿಸಲು ಕಾರ್ಯಕರ್ತರು ಸಿದ್ದರಾಗಬೇಕು ಎಂದು ಕಾರ್ಯಕರ್ತರಿಗೆ ಸಲಹೆ ನೀಡಿದರು.

ಈ ವೇಳೆ ಸಚಿವ ಸತೀಶ್ ಜಾರಕಿಹೊಳಿ ಅವರಿಗೆ ಗ್ರಾಮದ ಮುಖಂಡರು ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಸನ್ಮಾನಿಸಿದರು. ಈ ವೇಳೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್, ಸವದತ್ತಿ ಶಾಸಕರಾದ ವಿಶ್ವಾಸ್ ವೈದ್ಯ, ಯುವ ಕಾಂಗ್ರೆಸ್ ಮುಖಂಡ ಮೃಣಾಲ್ ಹೆಬ್ಬಾಳಕರ, ಡಿ.ಡಿ.ಟೋಪೋಜಿ, ಮಲ್ಲು ಜಕಾತಿ, ಉಮೇಶ್ ಬಾಳಿ, ಆರ್ಡಿ. ಪಾಟೀಲ, ಪರ್ವತಗೌಡ ಪಾಟೀಲ, ಅನೇಕ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತ-ರಿದ್ದರು.

## ಹೋಳಿ ಆಚರಣೆ–ಎಸ್ಸೆಸ್ಸೆಲ್ಸಿ ಪರೀಕ್ಷಾರ್ಥಿಗಳಿಗೆ ತೊಂದರೆಯಾಗದಿರಲಿ: ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಮನವಿ

ಬೆಳಗಾವಿ: ಹೋಳಿ ಹಬ್ಬವಿರುವ ಸೋಮವಾರ(ಮಾ.25) ಎಸ್ಸೆಸ್ಸೆಲ್ಸಿ ಪರೀಕ್ಷೆ ಕೂಡ ಇರುತ್ತದೆ. ಆ ದಿನ ಪರೀಕ್ಷೆಗೆ ತೆರಳುವ ಮಕ್ಕಳಿಗೆ ಬಣ್ಣ ಎರಚುವುದು ಸೇರಿದಂತೆ ಯಾವುದೇ ರೀತಿಯ ಒತ್ತಾಯ ಮಾಡಬಾರದು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಸಾರ್ವಜನಿಕರಲ್ಲಿ ಮನವಿ ಮಾಡಿಕೊಂಡಿದ್ದಾರೆ.

ಎಸ್ಸೆಸ್ಸೆಲ್ಸಿ ಪರೀಕ್ಷಾರ್ಥಿಗಳು ಸಕಾಲದಲ್ಲಿ ಪರೀಕ್ಷಾ ಕೇಂದ್ರ ತಲುಪಬೇಕಿರುವುದರಿಂದ ವಾಹನ ಸಂಚಾರಕ್ಕೆ ತೊಂದರೆಯಾಗದಂತೆ ಹೋಳಿ ಹಬ್ಬವನ್ನು ಆಚರಿಸಬೇಕು. ಪರೀಕ್ಷೆಗೆ ತೆರಳುವ ಮಕ್ಕಳಿಗೆ ಸಂಪೂರ್ಣ ಸಹಕಾರ ನೀಡಬೇಕು ಎಂದು ಜಿಲ್ಲಾಧಿಕಾರಿಗಳು ಕೋರಿದ್ದಾರೆ.

## ನೀರಿನ ವ್ಯತ್ಯಯ

ಬೆಳಗಾವಿ:ಬೆಳಗಾವಿ ನಗರಕ್ಕೆ ಸರಬರಾಜಾಗುವ ಕಚ್ಚಾ ನೀರು ಸರಬರಾಜಾಗುವ ತುಮ್ಮರಗುದ್ದಿ ಪಂಪಹೌಸ್‌ನಲ್ಲಿ 100 ಎಂ.ಎಂ ವಾಲ್ವನಲ್ಲಿ ಸೋರಿಕೆಯಾಗಿರವುದರಿಂದ ಮಾ.21 ತುರ್ತುದುರಸ್ಥಿ ಕೈಗೊಳ್ಳುವುದರಿಂದ ಮಾ.21 ರಿಂದ ಮಾ.22 ರವರೆಗೆ ಇಡೀ ಬೆಳಗಾವಿ ನಗರಕ್ಕೆ 24x7 ಪ್ರಾತ್ಯಕ್ಷಿಕ ವಲಯ ಸೇರಿ ನೀರು ಸರಬರಾಜು ಮಾಡುವಲ್ಲಿ (ಸರದಿಯಲ್ಲಿ) ಷೆಡ್ಯೂಲ್‌ನಲ್ಲಿ ವ್ಯತ್ಯಯ ಉಂಟಾಗುವುದು ಎಂದು ಬೆಳಗಾವಿ ಯೋ.ಅ.ಫ, ಕುಸ್ಸೆಂಪ್–ಕೆ.ಯು.ಐ.ಡಿ.ಎಫ್.ಸಿ, ಅಧೀಕ್ಷಕ ಅಭಿಯಂತರರು ಪ್ರಟಕಣೆಯಲ್ಲಿ ತಿಳಿಸಿದ್ದಾರೆ.

### ಲೋಕಸಭಾ ಚುನಾವಣೆ– 2024

# ಸ್ವೀಪ್ ಚಟುವಟಿಕೆ ಪರಿಣಾಮಕಾರಿ ಅನುಷ್ಠಾನಗೊಳಿಸಿ: ರಾಹುಲ ಶಿಂಧೆ



ಬೆಳಗಾವಿ: ಲೋಕಸಭಾ ಚುನಾವಣೆಯ ಸಂಬಂಧ ಜಿಲ್ಲೆಯಲ್ಲಿ ಮತದಾನದ ಶೇಕಡಾವಾರು ಪ್ರಮಾಣ ಹೆಚ್ಚಿಸಲು ಹಾಗೂ ಮತದಾರರಲ್ಲಿ ನೈತಿಕ ಮತದಾನದ ಕುರಿತು ಜಾಗೃತಿ ಮೂಡಿಸುವದರ ಜೊತೆಗೆ ಸ್ವಿಪ್ ಕಾರ್ಯಕ್ರಮಗಳನ್ನು ಪರಿಣಾಮಕಾ–ರಿಯಾಗಿ ಅನುಷ್ಠಾನಕ್ಕೆ ಅಧಿಕಾರಿಗಳು ಮುಂದಾಗಬೇಕು ಎಂದು ಜಿಲ್ಲಾ ಸ್ವಿಪ್ ಸಮಿತಿಯ ನೋಡೆಲ್ ಅಧಿಕಾರಿಯೂ ಆಗಿರುವ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ರಾಹುಲ ಶಿಂಧೆ ಅವರು ತಿಳಿಸಿದರು.

ಜಿಲ್ಲಾ ಪಂಚಾಯತ್ ವಿಡೀಯೊ ಸಂವಾದ ಸಭಾಂಗಣದಲ್ಲಿ ಮಾ.21 ರಂದು ಜರುಗಿದ ಜಿಲ್ಲಾ ಸ್ವಿಪ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಾರ್ವಜನಿಕರಲ್ಲಿ ನೈಜ ಮತದಾನದ ಅರಿವು ಮತ್ತು ಮತದಾನದ ಪ್ರಮಾಣ ಹೆಚ್ಚಿಸುವಲ್ಲಿ ಸ್ವೀಪ್ ಸಮಿತಿಯಿಂದ ನಿರಂತರ ಚಟುವಟಿಕೆ ಕಾರ್ಯಕ್ರಮಗಳನ್ನು ವ್ಯವಸ್ಥಿತವಾಗಿ ಹಾಗೂ ಪರಿಣಾಮಕಾ–ರಿಯಾಗಿ ಆಯೋಜಿಸಬೇಕು. ಕಳೆದ ಚುನಾವಣೆಗಳಲ್ಲಿ ನಗರ ಪ್ರದೇಶಗಳಲ್ಲಿ ಮತದಾನ ಪ್ರಮಾಣ ಗ್ರಾಮೀಣ ಭಾಗಗಳಿಗಿಂತ ಕಡಿಮೆ ಆಗಿದ್ದು ನಗರ ಪ್ರದೇಶಗಳಲ್ಲಿ ಮತದಾನ ಪ್ರಮಾಣ ಹೆಚ್ಚಿಸಲು ಸಂಬಂಧಿತ ಅಧಿಕಾರಿಗಳು ಕಾರ್ಯ ಪ್ರವೃತ್ತರಾಗಬೇಕು.

ಮತದಾನ ಜಾಗೃತಿಗಾಗಿ ಬೀದಿ ನಾಟಕ, ವಿಭಿನ್ನ ಕಾರ್ಯಕ್ರಮಗಳನ್ನು ಆಯೋಜಿಸುವದರ ಜೊತೆಗೆ ಮನೆ ಮನೆಗೆ ಭೇಟಿ ನೀಡಿ ಮತದಾನದ ಕು–ರಿತು ಜಾಗೃತಿ ಮೂಡಿಸಬೇಕು. ಕಳೆದ ಚುನಾಣೆಗಳಲ್ಲಿ ಕಡಿಮೆ ಮತದಾನವಾಗಿ ರುವಂತಹ ಮತಗಟ್ಟೆಗಳನ್ನು ಗುರುತಿಸಿ ಆ ಭಾಗದಲ್ಲಿ ಸೂಕ್ತ ಯೋಜನೆಗಳನ್ನು ರೂಪಿಸಿಕೊಂಡು ಸ್ವಿಪ್ ಚಟುವಟಿ–ಕೆಗಳನ್ನು ನಡೆಸುವ ಮೂಲಕ ಮತದಾನದ ಪ್ರಮಾಣ ಹೆಚ್ಚಿಸಲು ಅಗತ್ಯ ಕ್ರಮ ಕೈಗೊಳ್ಳಲು ಸೂಚನೆ ನೀಡಿದರು.

ಜಿಲ್ಲೆಯಲ್ಲಿನ ವಲಸೆ ಕಾರ್ಮಿಕರನ್ನು ಗುರುತಿಸಿ ಮತದಾನ ದಿನದಂದು ಪಾಲ್ಗೊಳ್ಳಲು ಪ್ರೇರೆಪಿಸಬೇಕು. ಜೊತೆಗೆ ಜನದಟ್ಟಣೆ ಇರುವಂತಹ ಪ್ರದೇಶಗಳಲ್ಲಿ ಮತದಾನ ಮಹತ್ವದ ಕುರಿತು ಹೆಚ್ಚಿನ ಜಾಗೃತಿ ಮೂಡಿಸಲು ಕ್ರಮ ಜರುಗಿಸಬೇಕು. ಮತದಾನದ ದಿನದಂದು ಅರ್ಹ ಮತದಾರರೆಲ್ಲರೂ ಮತಗಟ್ಟೆಗಳಿಗೆ ಆಗಮಿಸಿ ತಮ್ಮ ಹಕ್ಕನ್ನು ಚಲಾಯಿಸಬೇಕು. ಅಲ್ಲದೇ ಮತಗಟ್ಟೆಗಳಲ್ಲಿ ಅಗತ್ಯದ ಎಲ್ಲ ಮೂಲಭೂತ ಸೌಕರ್ಯಗಳನ್ನು ಒದಗಿಸುವದರ ಮೂಲಕ ಅರ್ಹ ಮತದಾರರೆಲ್ಲರೂ ಮತದಾನ ಪ್ರಕ್ರಿಯೆಯಲ್ಲಿ ಭಾಗವಹಿಸುವಂತೆ ಕಾರ್ಯಕ್ರಮಗಳನ್ನು ಆಯೋಜಿಸಬೇಕು.

ಸ್ವೀಪ್ ಸಮಿತಿ ಸದಸ್ಯರು ತಮಗೆ ವಹಿಸಿದ ಕಾರ್ಯಹಂಚಿಕೆ ವ್ಯಾಪ್ತಿಯಲ್ಲಿ ನಡೆಸುವ ಸ್ವೀಪ್ ಚಟುವಟಿಕೆಗಳ ಸಂಬಂಧ ಪ್ರತಿನಿತ್ಯ ಚಟುವಟಿಕೆಗಳನ್ನು ಕೈಗೊಳ್ಳುವದರ ಮೂಲಕ ಜಿಲ್ಲೆಯ ಯಾವೊಬ್ಬ ಅರ್ಹ ಮತದಾರರು ಮತದಾನದದಿಂದ ವಂಚಿರಾಗದಂತೆ, ಸ್ವಯಂ ಪ್ರೇರಣೆಯಿಂದ ಮತದಾನದ ಹಬ್ಬದಲ್ಲಿ ಭಾಗಿವಹಿಸುವಂತಹ ಕಾರ್ಯಕ್ರಮಗಳನ್ನು ಆಯೋಜಿಸಲು ತಿಳಿಸಿದರು.

**ಸ್ವೀಪ್ ಘೋಷವಾಕ್ಯ:**

ಈ ವರ್ಷದ ಸ್ವೀಪ್ ಘೋಷವಾಕ್ಯ 'ಚುನಾವಣಾ ಪರ್ವ ದೇಶದ ಗರ್ವ ಯಾವೊಬ್ಬ ಮತದಾರನೂ ಮತದಾನದಿಂದ ಹೊರಗುಳಿಯಬಾರದ ು.'ಮತದಾನಕ್ಕಿಂತ ಇನ್ನೊಂದಿಲ್ಲ, ನಾನು ಖಚಿತವಾಗಿ ಮತದಾನ ಮಾಡುವೆ' ಎಂಬ ಧ್ಯೇಯ ಹೊಂದಬೇಕು ಎಂಬ ಘೋಷವಾಕ್ಯದೊಂದಿಗೆ ಮತದಾರರಲ್ಲಿ ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರಾದ ರಾಹುಲ ಶಿಂಧೆ ಹೇಳಿದರು.

ಸಭೆಯಲ್ಲಿ ಜಿಲ್ಲಾ ಯೋಜನಾ ಕೋಶದ ಯೋಜನಾ ನಿರ್ದೇಶಕ ಮಲ್ಲಿಕಾರ್ಜುನ್ ಕಲಾದಗಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ಆರ್. ನಾಗರಾಜ, ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿ ಅಬ್ದುಲ್ ರಶೀದ್ ಮಿರ್ಜನ್ನವರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕಿ ವಿದ್ಯಾವತಿ ಭಜಂತ್ರಿ, ವಿಕಲಚೇತನರ ಕಲ್ಯಾಣಾಧಿಕಾರಿ ನಾಮದೇವ ಬಿಲ್ಕರ್ ಸೇರಿದಂತೆ ವಿವಿಧ ಇಲಾಖೆ ಅಧಿಕಾ–ರಿಗಳು ಉಪಸ್ಥಿತರಿದ್ದರು.

# ಚುನಾವಣಾ ಪ್ರಚಾರ–ಮಾಧ್ಯಮಗಳ ಮೇಲೆ ನಿಗಾ: ಗುರುನಾಥ ಕಡಬೂರ

ಬೆಳಗಾವಿ: ಲೋಕಸಭಾ ಚುನಾವಣೆಯನ್ನು ಮುಕ್ತ, ನ್ಯಾಯಸಮ್ಮತ ನಡೆಸುವುದು ನಮ್ಮೆಲ್ಲರ ಕರ್ತವ್ಯ. ಈ ನಿಟ್ಟಿನಲ್ಲಿ ಎಲ್ಲರೂ ಅಚ್ಚುಕಟ್ಟಾಗಿ ಕಾರ್ಯ ನಿರ್ವಹಿಸುವ ಮೂಲಕ ಚುನಾವಣೆ ಪ್ರಕ್ರಿಯೆ ಯಶಸ್ವಿಗೆ ಶ್ರಮಿಸಬೇಕು ಎಂದು ವಾರ್ತಾ ಇಲಾಖೆ ಉಪ ನಿರ್ದೇಶಕ ಹಾಗೂ ಮಾಧ್ಯಮ ಕಣ್ಗಾವಲು ಘಟಕದ ನೋಡಲ್ ಅಧಿಕಾರಿ ಗುರುನಾಥ ಕಡಬೂರ ಅವರು ತಿಳಿಸಿದರು.

ಲೋಕಸಭಾ ಉಪಚುನಾವಣೆಗೆ ಸಂಬಂಧಿಸಿದಂತೆ ನಗರದ ವಾರ್ತಾ ಭವನದಲ್ಲಿ ಗುರುವಾರ (ಮಾ.21) ನಡೆದ ಜಿಲ್ಲಾ ಮಾಧ್ಯಮ ಕಣ್ಗಾವಲು ಘಟಕದ ಸದಸ್ಯರ ಸಭೆಯಲ್ಲಿ ಅವರು ಮಾತನಾಡಿದರು.

ಅಭ್ಯರ್ಥಿಗಳು ತಮ್ಮ ಸ್ವಂತ ಫೇಸ್ಬುಕ್ ಖಾತೆ ಸೇರಿದಂತೆ ಇತರೆ ಸಾಮಾಜಿಕ ಜಾಲತಾಣಗಳಲ್ಲಿ ಬೇರೆಯವರ ಮಾನಹಾನಿ, ನಂಬಿಕೆ, ಗೌರವಕ್ಕೆ ಧಕ್ಕೆ ತರುವಂತಹ ವಿಷಯಗಳನ್ನು ಹಂಚಿಕೊಂಡರೆ ಅಂಥವುಗಳನ್ನು ಗಮನಿಸಿ ಚುನಾವಣಾಧಿಕಾರಿಗಳಿಗೆ ವರದಿ ನೀಡಬೇಕು. ಸಾಮಾಜಿಕ ಜಾಲತಾಣಗಳಲ್ಲಿ ವೈಯಕ್ತಿಕ ಖಾತೆಗಳ ಮೂಲಕ ವೈಯಕ್ತಿಕ ಅನಿಸಿಕೆ, ಅಭಿಪ್ರಾಯವನ್ನು ಹಂಚಿಕೊಳ್ಳಲು ಸಾರ್ವಜನಿಕರು ಹಾಗೂ ಅಭ್ಯರ್ಥಿಗಳಿಗೆ ಅವಕಾಶವಿರುತ್ತದೆ. ಆದರೆ ಅಭ್ಯರ್ಥಿಗಳು ಏಕಕಾಲದಲ್ಲಿ ಲಕ್ಷಾಂತರ ಜನರನ್ನು ತಲುಪಲು ಗೂಗಲ್ ಅಥವಾ ಫೇಸಬುಕ್ ಮೂಲಕ ಕೈಗೊಳ್ಳುವ ಚುನಾವಣಾ ಪ್ರಚಾರದ ವಿಷಯವಸ್ತುವಿಗೆ ಕಡ್ಡಾಯವಾಗಿ ಪ್ರಮಾಣೀಕರಣ ಪಡೆಯಬೇಕು ಎಂದು ತಿಳಿಸಿದರು.



ಚುನಾವಣೆಗೆ ಸಂಬಂಧಿಸಿದಂತೆ ಆಡಿಯೋ–ವಿಷುವಲ್ ಪ್ರಚಾರ ಕೈಗೊಳ್ಳುವುದಕ್ಕಿಂತ ಮೊದಲು ಅಭ್ಯರ್ಥಿಗಳು ಎಂಸಿಎಂಸಿ ಪೂರ್ವಾನುಮತಿಯನ್ನು ಕಡ್ಡಾಯವಾಗಿ ಪಡೆಯುವುದು ಅಗತ್ಯವಿರುವುದರಿಂದ ನಿಯೋಜಿತ ಅಧಿಕಾರಿ, ಸಿಬ್ಬಂದಿಗಳು ವಿಡಿಯೋಗಳನ್ನು ಸೂಕ್ಷ್ಮವಾಗಿ ಗಮನಿಸಬೇಕು ಎಂದು ಹೇಳಿದರು.

ಅಭ್ಯರ್ಥಿಗಳ ಚುನಾವಣಾ ಖರ್ಚು–ವೆಚ್ಚಗಳ ಮೇಲೆ ನಿಗಾ ವಹಿಸಲು ಅನುಕೂಲವಾಗುವಂತೆ ಮಾಧ್ಯಮ ಕಣ್ಗಾವಲು ಘಟಕ ಕಾರ್ಯ ನಿರ್ವಹಿಸಬೇಕು.

ಟಿವಿ, ಕೇಬಲ್ ಟಿವಿ, ಎಲ್.ಇ.ಡಿ. ವಾಹನಗಳ ಮೂಲಕ ಪ್ರಚಾರ, ಆಡಿಯೋ ಪ್ರಚಾರ, ಬಲ್ಕ್ ಎಸ್.ಎಂ.ಎಸ್, ವಾಟ್ಸಾಪ್ ಹಾಗೂ ಸಾಮಾಜಿಕ ಜಾಲತಾಣಗಳ ಮೂಲಕ ಪ್ರಚಾರಕ್ಕಾಗಿ ಎಂಸಿಎಂಸಿ.ಯಿಂದ ಪೂರ್ವಾನುಮತಿ ಪಡೆಯಲು ಬರುವ ಅರ್ಜಿಗಳನ್ನು ಪರಿಶೀಲಿಸಿ ಮೇಲಾಧಿಕಾ–ರಿಗಳಿಗೆ ತಿಳಿಸಬೇಕು ಎಂದು ಮಾಧ್ಯಮ ಕಣ್ಗಾವಲು ಘಟಕದ ನೋಡಲ್ ಅಧಿಕಾರಿ ಗುರುನಾಥ ಕಡಬೂರ ಅವರು ಹೇಳಿದರು.

ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಮಾಧ್ಯಮ ಕಣ್ಗಾವಲು ಘಟಕದ ನೋಡಲ್ ಅಧಿಕಾರಿ ವಿಜಯಕುಮಾರ ಬೆಟಗೇರಿ, ಸಣ್ಣ ಉಳಿತಾಯ ಖಾತೆ ಸಹಾಯಕ ನಿರ್ದೇಶಕ ಎಂ.ವಿ ಕಂಗ್ರಾಳಕಾರ, ಸಿಟಿಇ ಕಾಲೇಜಿನ ಉಪನ್ಯಾಸಕಿ ಪ್ರೊ. ಝುಡ್.ಜಿ ಸಯ್ಯದ್, ವಾರ್ತಾ ಇಲಾಖೆ ಸಿಬ್ಬಂದಿಗಳಾದ ಅನಂತ ಪಪ್ಪು, ಎಂ.ಎಲ್ ಜಮಾದರ, ಶಿಕ್ಷಣ ಇಲಾಖೆಯ ಶ್ರೀಮತಿ ಎಂ.ಎಂ ಪಾಟೀಲ, ಎಸ್.ಎಸ್. ನಾಗನೂರ, ಮಹಾದೇವ ನಿಚ್ಚಣಕಿ ಮತ್ತು ಮಾಧ್ಯಮ ಕಣ್ಗಾವಲು ಘಟಕದ ನಿಯೋಜಿತ ಅಧಿಕಾರಿಗಳು ಮತ್ತು ಸಿಬ್ಬಂದಿ ಸಭೆಯಲ್ಲಿ ಉಪಸ್ಥಿತರಿದ್ದರು.

# ಕೇಂದ್ರ ಕಾರಾಗೃಹದಲ್ಲಿ "ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ" ಕಾರ್ಯಕ್ರಮ ಆಯೋಜನೆ

ಬೆಳಗಾವಿ: ಕೇಂದ್ರ ಕಾರಾಗೃಹ ಬೆಳಗಾವಿಯಲ್ಲಿ "ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ" ನಿಮಿತ್ಯ ಕಾರ್ಯಕ್ರಮ ಆಯೋಜಿಸಲಾಗಿ–ತ್ತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾರಾಗೃಹದ ಮುಖ್ಯಅಧೀಕ್ಷಕರಾದ ಶ್ರೀ. ಕೃಷ್ಣಕುಮಾರ ವಹಿಸಿದ್ದರು ಹಾಗೂ ಅಧೀಕ್ಷಕರಾದ ಶ್ರೀ. ವಿಜಯಎಸ್. ರೋಡಕರ ಹಾಗೂ ಆಡಳಿತಾಧಿಕಾ–ರಿಗಳಾದ ಶ್ರೀ.ಬಿ. ಎಸ್. ಪೂಜಾರಿ ಉಪಸ್ಥಿತರಿದ್ದರು.




ಕಾರ್ಯಕ್ರಮ ಉದ್ದೇಶಿಸಿ ಶ್ರೀ. .ಕೃಷ್ಣಕುಮಾರ ಮಾತನಾಡಿ ತಾಳ್ಮೆ, ಸಹನೆಯ ಪ್ರತಿರೂಪವೇ ಹೆಣ್ಣು ಇಂದಿನ ಆಧುನಿಕ ಯುಗದಲ್ಲಿ ಮಹಿಳೆಯರು ಎಲ್ಲ ಕ್ಷೇತ್ರಗಳಲ್ಲಿ ಪುರುಷರಿಗೆ ಸರಿ ಸಮಾನವಾಗಿಕಾರ್ಯ ನಿರ್ವಹಿಸುತ್ತ ತಮ್ಮದೇ ಆದಛಾಪನ್ನು ಮೂಡಿಸಿದ್ದಾರೆ. ಅವರ ಕೊಡುಗೆಯನ್ನು ಸ್ಮರಿಸಲು ಈ ದಿನವನ್ನು ಮಹಿಳೆಯರಿಗಾಗಿ ಮೀಸಲಾಗಿಸಲಾಗಿದೆ. ಸಮಾಜದಲ್ಲಿ ಮಹಿಳೆಯನ್ನು ಗೌರವಿಸುವ ಕಾರ್ಯಎಲ್ಲರ ಮನೆಗಳಿಂದಲೇ ಆರಂಭವಾಗಬೇಕು. ಕುಟುಂಬದಲ್ಲಿ ಪ್ರತಿಯೊಬ್ಬರುಗಂಡು ಹೆಣ್ಣು ಎಂಬ ಬೇಧಭಾವ ಮಾಡಬಾರದು. ಮಹಿಳೆಯರಿಗೆ ಸಿಗಬೇಕಾದ ಮೀಸಲಾತಿ ಪ್ರಮಾಣ ಹೆಚ್ಚಾಗಬೇಕು. ಹಾಗೂ ಇಂದಿನ ಆಧುನಿಕ ಕಾಲದಲ್ಲಿ ಮಹಿಳೆಯರು ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುವುದರ ಜೊತೆಗೆ ತಮ್ಮ ಕುಟುಂಬದ ಜವಾಬ್ದಾರಿಯನ್ನು ಉತ್ತಮ ರೀತಿಯಲ್ಲಿ ನಿಭಾಯಿಸುತ್ತಿದ್ದಾರೆ. ಕಾರಣ ಸಮಜದಲ್ಲಿ ಮಹಿಳೆಯವರಿಗೆ ಅತ್ಯುನ್ನತ ಸ್ಥಾನವಿದೆ. ಮನೆಯೇ ಮೊದಲ ಪಾಠಶಾಲೆ. ತಾಯಿಯೇ ಮೊದಲ ಗುರು, ಹಾಗೂ ಹೆಣ್ಣೊಂದುಕಲಿತರೆ ಶಾಲೆಯೆಂದು ತೆರೆದಂತೆಹೀಗೆ ಮಹಿಳೆಯರು ತಮ್ಮಜೀವನದಲ್ಲಿಒಬ್ಬ ಮಗಳಾಗಿ ಅಕ್ಕ ತಂಗಿಯಾಗಿ ಹೆಂಡತಿಯಾಗಿಅಮ್ಮನಾಗಿಹಾಗೂ ಈ ರೀತಿ ವಿವಿಧ ಪಾತ್ರಗಳನ್ನು ನಿಭಾಯಿಸುತ್ತಿದ್ದಾರೇಎಂದು ಹೇಳಿದಳು.

ಕಾರ್ಯಕ್ರಮದಲ್ಲಿ ಸಿಬ್ಬಂದಿಗಳಾದ ಸಿಮಾ ಕುರಬೇಟ, ರೇಶಮಾಹಾಗೂ ಸಂಗೀತಾ ಸಲಗರೆ ಹಾಗೂ ಶೃತಿ ಹುಲಸರ್ಗೇರಿಇವರು ಹಾಡುಗಳನ್ನು ಹಾಡಿದರು.

ಕಾರ್ಯಕ್ರಮದ ವೇದಿಕೆಯಲ್ಲಿ ಅಧೀಕ್ಷಕರಾದ ಶ್ರೀ ವಿಜಯ ಎಸ್‌ರೋಡಕರ, ಆಡಳಿತಾದಿ ಕಾರಿ ಶ್ರೀ ಬಿ.ಎಸ್.ಪೂಜಾರಿ ಹಾಗೂ ಜೈಲರಗಳಾದ ಶ್ರೀ ರಾಜೇಶ, ಶ್ರೀ ಬಸವರಾಜ ಭಜಂತ್ರಿ,ಶ್ರೀ ಎಫ್.ಟಿ. ದಂಡಯನವರ ಹಾಗೂ ಸಹಾಯಕ ಜೈಲರ ಶ್ರೀಮತಿ ಅನುಸಯಾ ಪಾಟೀಲ ಉಪಸ್ಥಿತರಿದರು. ಕಾರಾಗೃಹದ ಉಪಾಧ್ಯಾಯರಾದ ಶ್ರೀ ಎಸ್. ಎಸ್.ಯಾದಗುಡೆ ಕಾರ್ಯಕ್ರಮ ನಿರೂಪಿಸಿವಂದಿಸಿದರು.

# ಲಂಚ ಸ್ವೀಕಾರ: ತಹಶೀಲ್ದಾರ್ ಗೆ ಲೋಕಾಯುಕ್ತ ಶಾಕ್



ತುಮಕೂರು: ಲಂಚ ಸ್ವೀಕರಿಸುವಾಗ ರೆಡ್ ಹ್ಯಾಂಡ್ ಆಗಿ ತಹಶೀಲ್ದಾರ್ ಲೋಕಾಯುಕ್ತ ಬಲೆಗೆ ಬಿದ್ದಿರುವ ಘಟನೆ ತುಮಕೂರಿನ ಚಿಕ್ಕನಾಯಕನಹಳ್ಳಿಯಲ್ಲಿ ಜರುಗಿದೆ. ಗೀತಾ, ಲೋಕಾಯುಕ್ತ ಬಲೆಗೆ ಬಿದ್ದ ತಹಶೀಲ್ದಾರ್ ಎಂದು ಹೇಳಲಾಗಿದೆ. ಚಿಕ್ಕನಾಯಕನಹಳ್ಳಿ ತಾಲೂಕಿನ ಗೋಡೆಕೆರೆಯ ರೈತ ಮಲ್ಲಿಕಾರ್ಜುನ್ ನಿಂದ ಲಂಚ ಸ್ವೀಕರಿಸುವಾಗ ಬಲೆಗೆ ಬಿದ್ದಿದ್ದಾರೆ. 33 ಗುಂಟೆ ಜಮೀನನ್ನ ಭೂ ಪರಿವರ್ತನೆ ಮಾಡಿಕೊಡಲು 3 ಲಕ್ಷ ಲಂಚಕ್ಕೆ ತಹಶಿಲ್ದಾರ್ ಗೀತಾ ಬೇಡಿಕೆಯಿಟ್ಟಿದ್ದರು. ಅದರಂತೆ ಇಂದು ಬೆಳಗ್ಗೆ 20 ಸಾವಿರ ಹಣ ಪಡೆಯುವಾಗ ಲೋಕಾ ಅಧಿಕಾ–ರಿಗಳು ದಾಳಿ ಮಾಡಿದ್ದಾರೆ. ತುಮಕೂರು ಲೋಕಾಯುಕ್ತ ಡಿವೈ–ಎಸ್ ಪಿ ರಾಮಕೃಷ್ಣ ಹಾಗೂ ಉಮಾಶಂಕರ್ ನೇತೃತ್ವದಲ್ಲಿ ದಾಳಿ ನಡೆದಿದ್ದು, ತಹಶಿಲ್ದಾರ್ ಗೀತಾರನ್ನ ಲೋಕಾಯುಕ್ತ ಅಧಿಕಾರಿಗಳು ವಶಕ್ಕೆ ಪಡೆದಿದ್ದಾರೆ.

# ಕರಪತ್ರ, ಪೋಸ್ಟರ ಮುದ್ರಣ ಮಾಲೀಕರ ಗಮನಕ್ಕೆ

ಬೆಳಗಾವಿ: ಲೋಕಸಭಾ ಸಾರ್ವತ್ರಿಕ ಚುನಾವಣೆ–2024ಕ್ಕೆ ಈಗಾಗಲೇ ಚುನಾವಣಾ ಆಯೋಗದಿಂದ ವೇಳಾಪಟ್ಟಿ ಪ್ರಕಟಿಸಲಾಗಿದೆ. ಚುನಾವಣಾ ಆಯೋಗದ ಮಾರ್ಗಸೂಚಿಂ–ರುನ್ವಯ ಚಿಕ್ಕೋಡಿ ಲೋಕಸಭಾ ವ್ಯಾಪ್ತಿಯ ಪ್ರಿಂಟಿಂಗ್ ಪ್ರೆಸ್ ಮಾಲಿಕರು ಚುನಾವಣಾ ಪ್ರಚಾರದ ಸಾಮಗ್ರಿಗಳ ಮುದ್ರಣ ಕಾರ್ಯ ಮಾಡಬೇಕು. ತಪ್ಪಿದ್ದಲ್ಲಿ ಶಿಸ್ತು ಕ್ರಮಕ್ಕೆ ಒಳಪಡಿಸಲಾಗುವುದು ಎಂದು ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿಯಾದ ರಾಹುಲ ಶಿಂಧೆ ಅವರು ಆದೇಶ ಹೊರಡಿಸಿರುತ್ತಾರೆ.

ಕರಪತ್ರ, ಬಿತ್ತಿಪತ್ರ, ಮುದ್ರಣ ಮಾಡುವಾಗ ಅವುಗಳಲ್ಲಿ ಪ್ರಿಂಟಿಂಗ್ ಪ್ರೆಸ್ ಹೆಸರು ಹಾಗೂ ಮುದ್ರಿತ ಪ್ರತಿಗಳ ಸಂಖ್ಯೆ ನಮೂದಿಸುವುದು. ಮುದ್ರಕರು ಆಯೋಗವು ನಿಗದಿಪಡಿಸಿದ ಅರ್ಜಿ ನಮೂನೆಯಲ್ಲಿ ಪ್ರಕಾಶಕರಿಂದ ವಿವರಗಳನ್ನು ಪಡೆದು ಮುದ್ರಣ ಕಾರ್ಯ ಕೈಗೊಳ್ಳಬೇಕು. ಮುದ್ರಣವು ಉದ್ದೇಶಿತ ಪ್ರಕಾಶಕರಿಂದ ಸಹಿ ಮಾಡಲ್ಪಟ್ಟ ಮತ್ತು ಅವನ ವೈಯಕ್ತಿಕವಾಗಿ ತಿಳಿದಿರುವ ಇಬ್ಬರು ವ್ಯಕ್ತಿಗಳಿಂದ ದೃಢೀಕರಿಸಲ್ಪಟ್ಟ ಅವನ ಗುರುತಿನ ಘೋಷಣೆಯನ್ನು ದ್ವಿ–ಪ್ರತಿಯಲ್ಲಿ ಪಡೆಯಬೇಕು. ಮುದ್ರಣ ಘೋಷಣೆಯ ಒಂದು ಪ್ರತಿಯನ್ನು ಮತ್ತು ದಾಖಲೆಯ ಒಂದು ಪ್ರತಿಯನ್ನು ಮುದ್ರಿಸಿರುವ ಜಿಲ್ಲಾ ಮ್ಯಾಜಿಸ್ಟ್ರೇಟ ಇವರಿಗೆ ಸಲ್ಲಿಸಬೇಕು.

ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಯಾವುದೇ ರೀತಿಯ ರಾಜಕೀಯ ಮತ್ತು ಕೋಮುಗಲಭೆ, ದ್ವೇಷ ಭಾವನೆ ಕೆರಳಿಸುವಂತಹ ಬ್ಯಾನರ, ಹೋಲ್ಡಿಂಗ್ಸಳಾಗಲಿ ಮತ್ತು ಕರಪತ್ರಗಳನ್ನಾಗಲಿ ಮುದ್ರಿಸುವಂತಿಲ್ಲ. ಚುನಾವಣಾ ಆಯೋಗ ನೀಡಿರುವ ಮಾರ್ಗಸೂಚಿಗಳು ಉಲ್ಲಂಘನೆಯಾದಲ್ಲಿ ಕಾನೂನು ರೀತ್ಯ ಕ್ರಮ ಜರುಗಿಸಲಾಗುವುದು ಎಂದು ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿಗಳಾದ ರಾಹುಲ ಶಿಂಧೆ ಅವರು ಆದೇಶದಲ್ಲಿ ತಿಳಿಸಿರುತ್ತಾರೆ.

# ಸವದತ್ತಿ; ಅಕ್ರಮವಾಗಿ ಮದ್ಯ ಸಾಗಾಟ: ಓರ್ವನ ಬಂಧನ

ಬೆಳಗಾವಿ: ದ್ವಿಚಕ್ರ ವಾಹನದ ಮೇಲೆ ಅಕ್ರಮವಾಗಿ 8.640 ಲೀಟರ್ ಮದ್ಯವನ್ನು ಸಾಗಾಟ ಮಾಡುತ್ತಿರುವಾಗ ಸವದತ್ತಿ ಅಬಕಾರಿ ಪೊಲೀಸರು ದಾಳಿ ನಡೆಸಿ ಮದ್ಯ ಸೇರಿದಂತೆ ದ್ವಿಚಕ್ರ ವಾಹನವನ್ನು ವಶಕ್ಕೆ ಪಡೆದುಕೊಂಡಿದ್ದಾರೆ.

ಬಸಪ್ಪ ಬಂಡ್ರೋಳ್ಳಿ ಬಂಧಿತ ಆರೋಪಿ. ಇತನು ಸವದತ್ತಿ ತಾಲೂಕಿನ ಮುನವಳ್ಳಿಯಿಂದ ಕಿಟದಾಳಕ್ಕೆ ಹೋಗುವ ರಸ್ತೆಯಲ್ಲಿ ತನ್ನ ದ್ವಿಚಕ್ರ ವಾಹನ ಮೇಲೆ ಅಕ್ರಮವಾಗಿ 8.640 ಲೀಟರ್ ಮದ್ಯವನ್ನು ಸಾಗಾಟ ಮಾಡುತ್ತಿರುವಾಗ ಅಬಕಾರಿ ಪೊಲೀಸರು ಬಸಪ್ಪನನ್ನು ವಶಕ್ಕೆ ಪಡೆದು ಒಟ್ಟು 1,13,850 – ರೂ. ಮೌಲ್ಯದ ಮದ್ಯ ಹಾಗೂ ವಾಹನವನ್ನು ವಶಪಡಿಸಿಕೊಂಡಿದ್ದಾರೆ.



ಈ ಕುರಿತು ಸವದತ್ತಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಅನಧೀಕೃತ ನಳ ಸಂಪರ್ಕಕ್ಕೆ ಕಡಿತಗೊಳಿಸುವಿಕೆಗೆ ಚಾಲನೆ

ಬೆಳಗಾವಿ: ಬೆಳಗಾವಿ ನಗರದಲ್ಲಿ ಅನಧೀಕೃತ ನಳಗಳನ್ನು ಹೊಂದಿರುವ ಹಾಗೂ ನೀರಿನ ಕರ ಬಾಕಿ ಉಳಿಸಿಕೊಂಡವರ ನಳ ಸಂಪರ್ಕಗಳನ್ನು ಕಡಿತ ಗೊಳಿಸಲು ಆರಂಭಿಸಲಾಗಿದೆ.

ಬೇಸಿಗೆ ಆರಂಭವಾಗುತ್ತಲೇ ನಗರದಲ್ಲಿ ನೀರಿನ ಅಭಾವವನ್ನು ಎದುರಿಸುತ್ತಿದೆ. ಸಾರ್ವಜನಿಕರು ನೀರನ್ನು ಮಿತವಾಗಿ ಬಳಸಲು ಹಲವಾರು ಬಾರಿ ಮನವಿ ಮಾಡಲಾಗಿದೆ.




ಅಲ್ಲದೇ ಅನಧೀಕೃತ ನಳಗಳನ್ನು ಅಧೀಕೃತ ಗೊಳಿಸಿಕೊಳ್ಳಲು ಮಾ.31 ರವರೆಗೆ ಗಡವು ನೀಡಿದ್ದು, ಸಂಬಂಧಿಸಿದ ಅನಧೀಕೃತ ನಳ ಸಂಪರ್ಕದಾರರು ಕೂಡಲೇ ಅಧೀಕೃತ ಗೊಳಿಸಿಕೊಳ್ಳಲು ಮತ್ತೊಮ್ಮೆ ವಿನಂತಿಸಲಾಗಿದೆ.

ಒತ್ತಡ ಸಹಿತ ನೀರು ಸರಬರಾಜು ಆಗುತ್ತಿದ್ದರೂ, ಸಾರ್ವಜನಿಕರು ತಮ್ಮ ಮನೆ ನಳಕ್ಕೆ ನೀರು ಬಂದಾಗ ಮೋಟರ ಹಚ್ಚಿತ್ತಿರುವುದು ಕಂಡುಬಂದಿದೆ. ಇದರಿಂದ ಬಡಾವಣೆಯ ಅಥವಾ ಪ್ರದೇಶದ ಕೊನೆಯಲ್ಲಿರುವ ಮನೆಗಳಿಗೆ ನೀರು ಸಿಗದಂತಾಗುತ್ತದೆ. ಕಾರಣ ಯಾರೂ ಕೂಡ ಮೋಟರ ಬಳಸಬಾರದೆಂದು, ಹಾಗೇನಾದರೂ ಮೋಟ–ರ ಹಚ್ಚುವುದು ಕಂಡು ಬಂದಲ್ಲಿ ಮುಟ್ಟುಗೋಲು ಹಾಕಲಾಗುವುದು.

ನೀರಿನ ಕರವನ್ನು ಕಾಲಕಾಲಕ್ಕೆ ಭರಿಸಬೇಕೇಂದು ಹಾಗೂ ಅನಧೀಕೃತ ನಳಗಳನ್ನು ಅಧೀಕೃತ ಗೊಳಿಸಿಕೊಳ್ಳಲು ಅಥವಾ ನೀರು ಸರಬರಾಜಿಗೆ ಸಂಬಂಧಿಸಿದಂತೆ ಸಮಸ್ಯೆಗಳಿದ್ದಲ್ಲಿ ಟೋಲ್ ಫ್ರಿ ನಂಬರ 18004255656 ಅಥವಾ ಕಚೇರಿ ದೂರವಾಣಿ ಸಂಖ್ಯೆ 0831–2462933 ಸಂರ್ಕಿಸಬೇಕೆಂದು , ಬೆಳಗಾವಿ ಕೆಯುಐಡಿಎಫ್‌ಸಿ–ಕುಸ್ಸೆಂಪ್, ಅಧೀಕ್ಷಕ ಅಭಿಯಂತರು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಕ್ರಮ ಸಂಬಂಧಕ್ಕೆ ಅಡ್ಡಿ: ಪತಿಯನ್ನೇ ಹತ್ಯೆಗೈದ ಪಾಪಿ ಪತ್ನಿ

ರಾಯಚೂರು: ಅಕ್ರಮ ಸಂಬಂಧಕ್ಕೆ ಅಡ್ಡಿಯಾಗಿದ್ದ ಪತಿಯನ್ನು ಪತ್ನಿಯೇ ಕೊಲೆ ಮಾಡಿದ್ದಾಳೆ ಎಂದು ಮೃತನ ಕುಟುಂಬಸ್ಥರು ಆರೋಪಿಸಿರುವ ಘಟನೆ ಸಿಂಗನೋಡಿ ತಾಂಡಾದಲ್ಲಿ ಕೇಳಿಬಂದಿದೆ.

ಮೃತನನ್ನು ರಾಯಚೂರು ತಾಲೂಕು ಪಂಚಾಯಿತಿ ಮಾಜಿ ಸದಸ್ಯ ಹಾಗೂ ಹಾಲಿ ಗ್ರಾಮ ಪಂಚಾಯಿತಿ ಸದಸ್ಯ ರಾಜು ನಾಯ್ಕ್ (38) ಎಂದು ಗುರುತಿಸಲಾಗಿದೆ. ರಾತ್ರಿ ವೇಳೆ ಮದ್ಯದಲ್ಲಿ ನಿದ್ರೆ ಮಾತ್ರೆ ಹಾಕಿ ಕುಡಿಸಿ, ಉಸಿರು ಗಟ್ಟಿಸಿ ಹತ್ಯೆ ಮಾಡಲಾಗಿದೆ ಎಂದು ಮೃತನ ಕುಟುಂಬಸ್ಥರು ಆರೋಪಿಸಿದ್ದಾರೆ. ಅಲ್ಲದೇ ಗ್ರಾಮದಲ್ಲಿ ದೇವಸ್ಥಾನದ ಗೋಪುರ ಕಟ್ಟಲು ಬಂದಿದ್ದ ಮಹಾರಾಷ್ಟ್ರ ಮೂಲದ ವ್ಯಕ್ತಿಯೊಂದಿಗೆ ಮೃತನ ಪತ್ನಿ ಅನೈತಿಕ ಸಂಬಂಧ ಹೊಂದಿದ್ದಳು. ಇದೇ ವಿಚಾರಕ್ಕೆ ಆಗಾಗ ಗಲಾಟೆ ನಡೆಯುತ್ತಿತ್ತು ಎನ್ನಲಾಗಿದೆ. ಈ ಸಂಬಂಧ ಯಾಪಲದಿನ್ನಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮೃತನ ಪತ್ನಿ ಸ್ನೇಹಾಳನ್ನು ಪೊಲೀಸರು ವಶಕ್ಕೆ ಪಡೆದಿದ್ದು ವಿಚಾರಣೆ ನಡೆಸುತ್ತಿದ್ದಾರೆ. ಉಳಿದ ಆರೋಪಿಗಳ ಪತ್ತೆಗೆ ಪೊಲೀಸರು ಬಲೆ ಬೀಸಿದ್ದಾರೆ.

# ಜಲಸಂಕಷ್ಟ: ಜನರ ಪರದಾಟ

ಮೂಡಲಗಿ: ತಾಲ್ಲೂಕಿನಲ್ಲಿ ಕುಡಿಯುವ ನೀರಿಗೆ ಹಾಹಾಕಾರ ಏರ್ಪಟ್ಟಿದೆ. ಸುಣಧೋಳಿ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಹೊನಕುಪ್ಪಿ, ತಿಗಡಿ ಗ್ರಾಮ ಪಂಚಾಯ್ತಿಯ ಸಿದ್ದಾಪುರಹಟ್ಟಿ ಮತ್ತು ಹಳ್ಳೂರ ಗ್ರಾಮ ಪಂಚಾಯ್ತಿಗೆ ಸೇರಿದ ಗ್ರಾಮಗಳಲ್ಲಿ ಜಲಸಂಕಷ್ಟ ಗಂಭೀರ ಸ್ವರೂಪ ತಳೆದಿದ್ದು, ಟ್ಯಾಂಕರ್ ಮೂಲಕ ನೀರು ಪೂರೈಸಲಾಗುತ್ತಿದೆ.

ದುರಿಸುತ್ತಿವೆ. ಹೊನಕುಪ್ಪಿಯಲ್ಲಿ ಅಂತರ್ಜಲ ಮಟ್ಟ ಪಾತಾಳಕ್ಕೆ ಕುಸಿದಿದೆ. 1 ಸಾವಿರ ಅಡಿ ಆಳದವರೆಗೆ ಕೊಳವೆಬಾವಿ ಕೊರೆಯಿಸಿದರೂ, ನೀರು ಸಿಗುತ್ತಿಲ್ಲ. ಬಹುತೇಕ ಕೊಳವೆ ಬಾವಿ ಬತ್ತಿಹೋಗಿವೆ. ಇದಲ್ಲದೆ, ಪ್ರಮುಖ ಜಲಮೂಲವಾದ ತೋಟದ ಬಾವಿಗಳೂ ಬತ್ತಿಹೋಗಿ ಒಂದು ತಿಂಗಳಾಗಿದೆ. 4 ಸಾವಿರ ಜನಸಂಖ್ಯೆಯ ಹೊನಕುಪ್ಪಿಯಲ್ಲಿ ಜನರು ಕುಡಿಯುವ ನೀರಿಗಾಗಿ ಜನರು ಕೊಡಗಳನ್ನು ಹೊತ್ತು ತಿರುಗುವಂತಾಗಿದೆ.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089